ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
DAIRYADA DAARI NEWS PAPER
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
EMAIL : dairyadadaari@gmail.com
ಸಂಪುಟ: 01 ಸಂಚಿಕೆ: 207
ಬೆಲೆ ರೂ : 2.00
ರಾಯಚೂರು
ಪುಟ: 4
RNI NO: KNKAN/25/A2795
ಭಾನುವಾರ: 26-07-2026

# ಬೇಡಿಕೆಗಳಿಗೆ ಸರ್ಕಾರ ಅಸ್ತು: ಪ್ರತಿಭಟನೆ ಹಿಂಪಡೆದ ಕಾಕ್ರೋಚ್ ಜನತಾ ಪಾರ್ಟಿ

**ನವದೆಹಲಿ, ಜುಲೈ 25–** ನೀಟ್ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ಅಕ್ರಮಗಳನ್ನು ಖಂಡಿಸಿ ದೇಶಾದ್ಯಂತ ಕಾವೇರಿದ್ದ ವಿದ್ಯಾರ್ಥಿ ಹೋರಾಟಕ್ಕೆ ಕೊನೆಗೂ ಹೈಡ್ರಾಮಾ ಅಂತ್ಯಬಿದ್ದಿದೆ. ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದು, ವಿದ್ಯಾರ್ಥಿಗಳ ಬಾಕಿ ಇರುವ ಪ್ರಮುಖ ಬೇಡಿಕೆಗಳನ್ನು ಈಡೇರಿಸಲು ಕೇಂದ್ರ ಸರ್ಕಾರ ಸಮ್ಮತಿಸಿದ ಬೆನ್ನಲ್ಲೇ, ಪ್ರತಿಭಟನೆಯ ನೇತೃತ್ವ ವಹಿಸಿದ್ದ ಕಾಕ್ರೋಚ್ ಜನತಾ ಪಾರ್ಟಿ (ಅಎಕ) ತನ್ನ ಸುದೀರ್ಘ ಹೋರಾಟವನ್ನು ಅಧಿಕೃತವಾಗಿ ಹಿಂಪಡೆದಿದೆ.

ಸರ್ಕಾರದ ಸಮ್ಮತಿ ಮತ್ತು ಪ್ರಮುಖ ಬೇಡಿಕೆಗಳ ಈಡೇರಿಕೆ

ಕೇಂದ್ರ ಸಚಿವರಾದ ಜೆ.ಪಿ. ನಡ್ಡಾ ಹಾಗೂ ಜಿತೇಂದ್ರ ಸಿಂಗ್ ಅವರನ್ನೊಳಗೊಂಡ ಸರ್ಕಾರದ ತಂಡವು ಸಿಜೆಪಿ ನಿಯೋಗದೊಂದಿಗೆ ನಡೆಸಿದ ಸರಣಿ ಸಭೆಗಳ ನಂತರ ವಿದ್ಯಾರ್ಥಿಗಳ ಪ್ರಮುಖ ಬೇಡಿಕೆಗಳಿಗೆ ಸಮ್ಮತಿ ಸೂಚಿಸಿದೆ.

**ಶಿಕ್ಷಣ ಸಚಿವರ ರಾಜೀನಾಮೆ:** ಸಿಜೆಪಿಯ ಪ್ರಮುಖ ಹಾಗೂ ಮುಂಚೂಣಿ ಬೇಡಿಕೆಯಾಗಿದ್ದ ಶಿಕ್ಷಣ ಸಚಿವರ ನಿರ್ಗಮನ ನೆರವೇರಿದೆ.



**ವಿದ್ಯಾರ್ಥಿಗಳ ಮೇಲಿನ ಎಫ್ಐಆರ್ ವಾಪಸ್:** ದೆಹಲಿ ಹಾಗೂ ದೇಶದ ವಿವಿಧ ಭಾಗಗಳಲ್ಲಿ ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳ ವಿರುದ್ಧ ದಾಖಲಾಗಿದ್ದ ಎಲ್ಲಾ ಎಫ್ಐಆರ್‌ಗಳನ್ನು ಸಂಪೂರ್ಣವಾಗಿ ಹಿಂಪಡೆಯಲು ಸರ್ಕಾರ ಒಪ್ಪಿಕೊಂಡಿದೆ.

ಪರಿಹಾರ ಧನ ಘೋಷಣೆ: ನೀಟ್ ಅಕ್ರಮದಿಂದಾಗಿ ಮನನೊಂದು ಆತ್ಮಹತ್ಯೆಗೆ ಶರಣಾದ ವಿದ್ಯಾರ್ಥಿಗಳ ಕುಟುಂಬಗಳಿಗೆ ರೂ. 1 ಕೋಟಿ ಪರಿಹಾರ ನೀಡುವ ಬೇಡಿಕೆಗೆ ಸರ್ಕಾರ ತತ್ಕ್ಷಣ ಒಪ್ಪಿಗೆ ನೀಡಿದೆ. 2ನೇಪುಟಕ್ಕೆ

## ಪ್ರಧಾನ್ ರಾಜೀನಾಮೆ

### ವಿದ್ಯಾರ್ಥಿಗಳ ಒತ್ತಡಕ್ಕೆ ಮಣಿದು ಪ್ರಧಾನಿ ಮೋದಿಗೆ ತ್ಯಾಗ ಪತ್ರ ರವಾನೆ



**ನವದೆಹಲಿ, ಜು. 25– ದೆಹಲಿಯ ಜಂತರ್ ಮಂತರ್‌ನಲ್ಲಿ ವಿದ್ಯಾರ್ಥಿಗಳು ನಡೆಸಿದ ಹೋರಾಟಕ್ಕೆ ಜಯಸಿಕ್ಕಿದ್ದು, ಕೊನೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವ ಪತ್ರವನ್ನು ಧರ್ಮೇಂದ್ರ ಪ್ರಧಾನ್ ಇಂದು ಮಧ್ಯಾಹ್ನ 2.30ರ ಸುಮಾರಿಗೆ ಪ್ರಧಾನಿ ನರೇಂದ್ರ ಮೋದಿಯವರಿಗೆ ಕಳುಹಿಸಿದರು.**

**ಕಳೆದ 20 ದಿನಗಳಿಂದ ಕಾಕ್ರೋಚ್ ಜನತಾ ಪಕ್ಷ ನೀಟ್ ಅಕ್ರಮದ ವಿರುದ್ಧ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ** 2ನೇ ಪುಟಕ್ಕೆ

# 90% ರಸ್ತೆ ಕಾಮಗಾರಿ ಪೂರ್ಣ: ಈ ಹಂತದಲ್ಲಿ ಮಾನ್ವಿ ಬಂದ್ ಸೂಕ್ತವಲ್ಲ: ಸೈಯದ್ ನಜರುದ್ದೀನ್ ಖಾದ್ರಿ ಗುರು

ಧೈರ್ಯದ ದಾರಿ

**ಮಾನ್ವಿ, ಜು.25:** ಸಾತ್‌ಮೈಲ್‌ನಿಂದ ಸಿಂಧನೂರುವರೆಗೆ ನಿರ್ಮಾಣವಾಗುತ್ತಿರುವ ರಾಜ್ಯ ಹೆದ್ದಾರಿ ಕಾಮಗಾರಿ ಈಗಾಗಲೇ ಸುಮಾರು 90% ಪೂರ್ಣಗೊಂಡಿದ್ದು, ಉಳಿದಿರುವ ಕಾಮಗಾರಿಯನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಸರ್ಕಾರ, ಜನಪ್ರತಿನಿಧಿಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಸೈಯದ್ ನಜರುದ್ದೀನ್ ಖಾದ್ರಿ ಗುರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಅವರು, ರಸ್ತೆ ಕಾಮಗಾರಿಯು ಅಂತಿಮ ಹಂತದಲ್ಲಿರುವ ಸಂದರ್ಭದಲ್ಲಿ ಮಾನ್ವಿ ಬಂದ್‌ಗೆ ಕರೆ ನೀಡುವುದು ಸೂಕ್ತವಲ್ಲ ಎಂದು ತಿಳಿಸಿದ್ದಾರೆ. ಬಂದ್‌ನಿಂದ ವ್ಯಾಪಾರಸ್ಥರು, ವಿದ್ಯಾರ್ಥಿಗಳು, ರೈತರು, ರೋಗಿಗಳು, ಸರ್ಕಾರಿ ನೌಕರರು, ದಿನನಿತ್ಯ ಕೂಲಿ ಕಾರ್ಮಿಕರು ಹಾಗೂ ಸಾರ್ವಜನಿಕರಿಗೆ ಅನಗತ್ಯ ತೊಂದರೆಯಾಗಲಿದೆ. ಈಗಾಗಲೇ ಶೇ.90ರಷ್ಟು ಕಾಮಗಾರಿ ಪೂರ್ಣಗೊಂಡಿರುವುದರಿಂದ ಉಳಿದ ಶೇ.10ರಷ್ಟು ಕೆಲಸವನ್ನು ಶೀಘ್ರವಾಗಿ ಪೂರ್ಣಗೊಳಿಸುವ ನಿಟ್ಟಿನಲ್ಲಿ ಒತ್ತಡ ಹೇರುವುದು ಹೆಚ್ಚು ಫಲಪ್ರದವಾಗಲಿದೆ ಎಂದು ಅವರು ಹೇಳಿದ್ದಾರೆ.

ಸಾತ್‌ಮೈಲ್–ಸಿಂಧನೂರು ರಾಜ್ಯ ಹೆದ್ದಾರಿಯು ಈ ಭಾಗದ ಜನರ ಬಹುಕಾಲದ ಕನಸಾಗಿದ್ದು, ಇದರ ನಿರ್ಮಾಣದಿಂದ ಮಾನ್ವಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸಂಚಾರ, ವ್ಯಾಪಾರ, ಶಿಕ್ಷಣ, ಆರೋಗ್ಯ ಮತ್ತು ಕೃಷಿ ಚಟುವಟಿಕೆಗಳಿಗೆ ಹೆಚ್ಚಿನ ಅನುಕೂಲವಾಗಲಿದೆ. ಕಳೆದ ಹಲವು ವರ್ಷಗಳಿಂದ ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಸ್ಥಳೀಯ ಶಾಸಕರು, ಮಾಜಿ ಸಚಿವರು ಹಾಗೂ ಸರ್ಕಾರದ ಮಟ್ಟದಲ್ಲಿ ನಿರಂತರ ಪ್ರಯತ್ನಗಳು ನಡೆದಿವೆ. ಅಂತಿಮ



ಹಂತದಲ್ಲಿರುವ ಕಾಮಗಾರಿಯನ್ನು ರಾಜಕೀಯ ಅಥವಾ ಭಿನ್ನಾಭಿಪ್ರಾಯದ ವಿಚಾರವನ್ನಾಗಿಸದೆ, ಜನರ ಹಿತದೃಷ್ಟಿಯಿಂದ ಎಲ್ಲರೂ ಒಗ್ಗಟ್ಟಿನಿಂದ ಪೂರ್ಣಗೊಳಿಸಲು ಸಹಕರಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಬಂದ್‌ಗೆ ಬದಲಾಗಿ ಜಿಲ್ಲಾಧಿಕಾರಿ (D C), ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (SP), ಲೋಕೋಪಯೋಗಿ ಇಲಾಖೆ (PWD) ಅಧಿಕಾರಿಗಳು, ಗುತ್ತಿಗೆದಾರರು, ಸ್ಥಳೀಯ ಶಾಸಕರು, ಮಾಜಿ ಸಚಿವರು ಹಾಗೂ ವಿವಿಧ ಸಂಘಟನೆಗಳ ಮುಖಂಡರೊಂದಿಗೆ ತುರ್ತು ಸಭೆ ನಡೆಸಿ, ಉಳಿದಿರುವ ಕಾಮಗಾರಿಗೆ ಸ್ಪಷ್ಟ ಗಡುವು ನಿಗದಿಪಡಿಸಿ, ಒಂದು ಅಥವಾ ಎರಡು ತಿಂಗಳೊಳಗೆ ಕಾಮಗಾರಿ ಪೂರ್ಣಗೊಳಿಸುವ ಭರವಸೆ ಪಡೆಯುವುದು ಸೂಕ್ತ ಕ್ರಮವಾಗಲಿದೆ ಎಂದು ಅವರು ತಿಳಿಸಿದ್ದಾರೆ.

ಡ್ರೈನೇಜ್ ಹಾಗೂ ರಸ್ತೆ ಕಾಮಗಾರಿ ಆರಂಭದ ಹಂತದಲ್ಲಿದ್ದಾಗ ಪ್ರತಿಭಟನೆ ನಡೆಸಿದ್ದರೆ ಅದರ ಪರಿಣಾಮ ಬೇರೆ ರೀತಿಯಾಗಿರಬಹುದಿತ್ತು. ಆದರೆ ಈಗ ಕಾಮಗಾರಿ ಬಹುತೇಕ ಪೂರ್ಣಗೊಂಡಿರುವ ಸಂದರ್ಭದಲ್ಲಿ ಬಂದ್ ನಡೆಸಿದರೆ ಕೆಲಸದ ವೇಗ ಕುಂಠಿತಗೊಳ್ಳುವ ಸಾಧ್ಯತೆ ಇದೆ. ಇದರಿಂದ ಜನರಿಗೆ ಮತ್ತಷ್ಟು ವಿಳಂಬ ಉಂಟಾಗಬಹುದು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ಕೆಲ ಕಾಂಗ್ರೆಸ್ ಮುಖಂಡರು ಸಹ ಮಾನ್ವಿ ಬಂದ್‌ಗೆ ತಮ್ಮ ಬೆಂಬಲ ಇಲ್ಲ ಎಂದು ಬಹಿರಂಗವಾಗಿ ಅಭಿಪ್ರಾಯ ವ್ಯಕ್ತಪಡಿಸಿರುವುದನ್ನು ಉಲ್ಲೇಖಿಸಿದ ಅವರು, ತಮ್ಮದೇ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸುವ ಬದಲು ಸರ್ಕಾರದೊಂದಿಗೆ ಚರ್ಚಿಸಿ ಉಳಿದ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಒತ್ತಾಯಿಸುವುದು ಜನಪರ ನಿಲುವಾಗಲಿದೆ ಎಂದು ಹೇಳಿದ್ದಾರೆ.

ರಸ್ತೆ ಅಭಿವೃದ್ಧಿಯು ಯಾವುದೇ ಪಕ್ಷ ಅಥವಾ ಸಂಘಟನೆಯ ವಿಷಯವಲ್ಲ; ಅದು ಸಾರ್ವಜನಿಕರ ಹಕ್ಕು ಮತ್ತು ಅಭಿವೃದ್ಧಿಯ ಸಂಕೇತವಾಗಿದೆ. ಆದ್ದರಿಂದ ಜನರಿಗೆ ತೊಂದರೆ ಉಂಟುಮಾಡುವ ಬಂದ್‌ನಂತಹ ಕ್ರಮಗಳಿಗಿಂತ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಎಲ್ಲರೂ ಕೈಜೋಡಿಸಬೇಕು ಎಂದು ಎಂ.ಡಿ. ಮಹೆಮೂದ್ ಕರೆ ನೀಡಿದ್ದಾರೆ.

"ಜನರ ಅನುಕೂಲವೇ ನಮ್ಮ ಮೊದಲ ಆದ್ಯತೆ. ಅಭಿವೃದ್ಧಿ ಕಾಮಗಾರಿಗಳು ಶೀಘ್ರ ಪೂರ್ಣಗೊಳ್ಳಬೇಕು, ಆದರೆ ಸಾರ್ವಜನಿಕರಿಗೆ ತೊಂದರೆಯಾಗದ ರೀತಿಯಲ್ಲಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು" ಎಂದು ಅವರು ತಿಳಿಸಿದ್ದಾರೆ.

## ಅಕ್ಕ ಕೆಫೆಗೆ ಭೇಟಿ ನೀಡಿ ಪರಿಶೀಲಿಸಿದ ಜಿಲ್ಲಾ ಪಂಚಾಯತ್ ಸಿ.ಇ.ಓ. ಈಶ್ವರ ಕಾಂದೂ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ತಾಲೂಕು ಪಂಚಾಯತ್ ಹಳೆ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಂಜೀವಿನಿ ಮಾರ್ಟ ವಿಕ್ಷೀಸಿ ಸಾರ್ವಜನಿಕರಿಗೆ ನಿತ್ಯ ಅಗತ್ಯವಿರುವ ವಸ್ತುಗಳನ್ನು ಇನ್ನೂ ಹೆಚ್ಚಿನ ಪ್ರಾಮಾಣದಲ್ಲಿ ದಾಸ್ತನು ಇಡುವುದರಿಂದ ವ್ಯಾಪರ ಹೆಚ್ಚುವುದರಿಂದ ಹೆಚ್ಚಿನ ಲಾಭವನ್ನು ಪಡೆಯುವುದಕ್ಕೆ ಸಾಧ್ಯ ಎಂದು ರಾಯಚೂರು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕಾಂದೂ ತಿಳಿಸಿದರು.

ನೂತನವಾಗಿ ಪ್ರಾರಂಭಗೊಳ್ಳಲಿರುವ ಅಕ್ಕ ಕೆಫೆಗೆ ಭೇಟಿ ನೀಡಿ ಪರಿಶೀಲಿಸಿ ಅಕ್ಕ ಕೆಫೆಯಲ್ಲಿ ಸಾರ್ವಜನಿಕರಿಗೆ ಶುಚ್ಚಿ ರುಚ್ಚಿಯಾದ ಗುಣಮಟ್ಟದ ವಿವಿಧ ರೀತಿಯ ಆಹಾರ ಪಾಧರ್ಥಗಳನ್ನು ನೀಡಿದಲ್ಲಿ ಉತ್ತಮ ಅದಾಯಗಳಿಸುವುದಕ್ಕೆ ಸಾಧ್ಯವಾಗುತ್ತದೆ ಸರಕಾರ ದಿಂದ ಅಗತ್ಯ ಸಹಾಕರ ನೀಡಲಾಗುವುದು ಎಂದು ತಿಳಿಸಿದರು.

ತಾಲೂಕು ಪಂಚಾಯತ್ ಇ.ಓ. ಖಾಲೀದ್ ಅಹ್ಮದ್ ,ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರಾದ ದೀಪಾ ಅರಳಿಕಟ್ಟಿ ಇದ್ದರು.

## ದೀರ್ಘಾವಧಿಯ ಪತ್ರಿಕೋದ್ಯಮ ಸೇವೆಗೆ ಅರ್ಹ ಗೌರವ: ಪತ್ರಕರ್ತ ರಾಜಶೇಖರ ಹೆಚ್. ಅವರಿಗೆ ಜಿಲ್ಲಾ ಮಟ್ಟದ ಪ್ರಶಸ್ತಿ

ಧೈರ್ಯದ ದಾರಿ



**ಮಾನ್ವಿ:** ಅನೇಕ ವರ್ಷಗಳಿಂದ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಶ್ರದ್ಧೆ ಮತ್ತು ಬದ್ಧತೆಯಿಂದ ಸೇವೆ ಸಲ್ಲಿಸುತ್ತಾ ಬಂದಿರುವ ಪತ್ರಕರ್ತ ರಾಜಶೇಖರ ಹೆಚ್. ಅವರಿಗೆ ಕೊನೆಗೂ ಸೂಕ್ತ ಗೌರವ ಲಭಿಸಿದೆ. ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಹಮ್ಮಿಕೊಳ್ಳಲಾದ ಪತ್ರಿಕಾ ದಿನಾಚರಣೆಯ ಶುಭ ಸಂದರ್ಭದಲ್ಲಿ, ದಿ.ಮಹಾದೇವಮ್ಮ ಬಸವರಾಜ ಸ್ವಾಮಿ ಸ್ಮರಣಾರ್ಥ ಜಿಲ್ಲಾ ಮಟ್ಟದ ಪ್ರಶಸ್ತಿಗೆ ಇವರನ್ನು ಆಯ್ಕೆ ಮಾಡಲಾಗಿದೆ.

ರಾಯಚೂರು ಜಿಲ್ಲೆಯ ಮಾನ್ವಿ ಪಟ್ಟಣದ ಅಂಬೇಡ್ಕರ್ ನಗರದ ನಿವಾಸಿಯಾಗಿರುವ ರಾಜಶೇಖರ ಅವರು ತಮ್ಮ ನಿಸ್ವಾರ್ಥ ವರದಿಗಾರಿಕೆಯ ಮೂಲಕ ತಾಲೂಕು ಮತ್ತು ಜಿಲ್ಲೆಯಾದ್ಯಂತ ಚಿರಪರಿಚಿತರಾಗಿದ್ದಾರೆ. ಸಮಾಜದ ಜ್ವಲಂತ ಸಮಸ್ಯೆಗಳು, ಆಡಳಿತ ಯಂತ್ರದ ಲೋಪದೋಷಗಳು ಹಾಗೂ ಸಾರ್ವಜನಿಕರ ಧ್ವನಿಗೆ ಸೂಕ್ತ ವೇದಿಕೆ ಕಲ್ಪಿಸುವ ಮೂಲಕ ಹಲವಾರು ಬಾರಿ ಅಧಿಕಾರಿ ವರ್ಗವನ್ನು ಎಚ್ಚರಿಸುವ ಮಹತ್ವದ ಕೆಲಸವನ್ನು ಇವರು ಮಾಡಿದ್ದಾರೆ.

ತಮ್ಮ ಪ್ರಾಥಮಿಕ ಶಿಕ್ಷಣವನ್ನು ಮಾನ್ವಿಯ ಕೋನಾಪುರ ಪೇಟೆ ಸರ್ಕಾರಿ ಶಾಲೆಯಲ್ಲಿ, ಪ್ರೌಢ ಶಿಕ್ಷಣವನ್ನು ಸರ್ಕಾರಿ ಬಾಲಕರ ಪ್ರೌಢ ಶಾಲೆಯಲ್ಲಿ ಹಾಗೂ ಪಿಯುಸಿ ಶಿಕ್ಷಣವನ್ನು ಕಲ್ಮಠ ಕಾಲೇಜಿನಲ್ಲಿ ಪೂರ್ಣಗೊಳಿಸಿದರು. ನಂತರ ಪತ್ರಿಕೋದ್ಯಮದ ಕಡೆಗೆ ಹೆಚ್ಚಿನ ಒಲವು ಹೊಂದಿದ್ದ ಇವರು ರಾಯಚೂರಿನ ಸ್ಟಿಲ್ ಕಾಲೇಜಿನಲ್ಲಿ ಬಿ.ಎ. ಪತ್ರಿಕೋದ್ಯಮ ಪದವಿ ಪಡೆದು, ಗುಲ್ಬರ್ಗ ವಿಶ್ವವಿದ್ಯಾಲಯದಲ್ಲಿ ಎಂ.ಎ. ಪತ್ರಿಕೋದ್ಯಮ ಸ್ನಾತಕೋತ್ತರ ಪದವಿಯನ್ನು ಯಶಸ್ವಿಯಾಗಿ ಮುಗಿಸಿದರು. ಶಾರದಾ ಶಿಕ್ಷಣ ಸಂಸ್ಥೆಯಲ್ಲಿ ಬಿ.ಎಡ್ ಪೂರ್ಣಗೊಳಿಸಿದ್ದಾರೆ.

ಇವರ ಪತ್ರಿಕೋದ್ಯಮದ ಪಯಣವು 2013 ರಲ್ಲಿ 'ಸ್ಟಾರ್ ಆಫ್ ರಾಯಚೂರು' ದಿನಪ 'ತ್ರಿಕೆಯ ಮೂಲಕ ಪ್ರಾರಂಭವಾಯಿತು. ತದನಂತರ 'ವಿಜಯ ಕರ್ನಾಟಕ' ದಿನಪತ್ರಿಕೆ ಯಲ್ಲಿ ಮಾನ್ವಿ ತಾಲೂಕು ವರದಿಗಾರರಾಗಿ ನಾಲ್ಕು ವರ್ಷಗಳ ಕಾಲ ಅರ್ಥಪೂರ್ಣ ಸೇವೆ ಸಲ್ಲಿಸಿದರು. ಮುಂ ದುವರಿದು 'ರಾಯಚೂರು ಧ್ವನಿ' ದಿನಪತ್ರಿಕೆಯಲ್ಲಿ ಪ್ರಧಾನ ಸಂಪಾದಕರಾಗಿ ಜವಾಬ್ದಾರಿ ನಿಭಾಯಿಸಿದ ಇವರು,' ರಾಯಚೂರು ಸಂಜೆ', 'ಕಂಪಿಲ ವಾಣಿ' 'ಉದಯಕಾಲ', 'ತುಂಗಬಿಂಬ' ಮತ್ತು 'ನಮ್ಮ ನೆಲ' ಪತ್ರಿಕೆಗಳಲ್ಲಿಯೂ ವರದಿಗಾರರಾಗಿ ಕಾರ್ಯನಿರ್ವ ಹಿಸಿದ್ದಾರೆ. ಪ್ರಸ್ತುತ 'ಜಂಬೂದ್ವೀಪ' ಕನ್ನಡ ದಿನಪತ್ರಿಕೆಯ ಸಂಪಾದಕರಾಗಿ ಸೇವೆ ಸಲ್ಲಿಸುತ್ತಿರುವ ಇವರು, ಒಟ್ಟು 13 ವರ್ಷಗಳಿಂದ ಮಾಧ್ಯಮ ರಂಗದಲ್ಲಿ ಅತ್ಯಂತ ಕ್ರಿಯಾಶೀಲವಾಗಿ ನಿರತರಾಗಿದ್ದಾರೆ.

ರಾಜಕೀಯ, ಶಿಕ್ಷಣ, ಸಾಮಾಜಿಕ ಸಮಸ್ಯೆಗಳು ಹಾಗೂ ಕೃಷಿ ಕ್ಷೇತ್ರ ಸೇರಿದಂತೆ ವಿವಿಧ ವಿಷಯಗಳ ಕುರಿತು ಇವರು ಪ್ರಕಟಿಸಿದ ನೈಜ ಹಾಗೂ ವಿಶೇಷ ವರದಿಗಳು ಸಾರ್ವಜನಿಕ ವಲಯದಲ್ಲಿ ಅಪಾರ ಮೆಚ್ಚುಗೆ ಗಳಿಸಿವೆ. ದೀರ್ಘಾವಧಿಯ ಶ್ರಮ ಮತ್ತು ಕಠಿಣ ಪರಿಶ್ರಮಕ್ಕೆ ಸಿಕ್ಕ ಈ ಪ್ರಶಸ್ತಿಯು ಇವರ ಮುಂದಿನ ಪತ್ರಿಕೋದ್ಯಮ ಪಯಣಕ್ಕೆ ಮತ್ತಷ್ಟು ಸ್ಫೂರ್ತಿ ನೀಡಲಿ ಎಂದು ಸಾರ್ವಜನಿಕರು ಹಾಗೂ ಮಾಧ್ಯಮ ಮಿತ್ರರು ಹಾರೈಸಿದ್ದಾರೆ.

## ಕೃಷಿ ಇಲಾಖೆಯಿಂದ ಅಧಿಕ ಇಳುವರಿಗಾಗಿ ರೈತರಿಗೆ ಅಗತ್ಯ ಮಾಹಿತಿ ನೀಡಲಾಗುವುದು: ಈಶ್ವರ ಕಾಂದೂ



ಧೈರ್ಯದ ದಾರಿ

**ಮಾನ್ವಿ:** ತಾಲೂಕಿನ ಕುರ್ಡಿ ಕ್ರಾಸ್ ಹತ್ತಿರದ ರೈತ ವೆಂಕಟೇಶ್ವರ ರೆಡ್ಡಿ ರವರ ಜಮೀನಿನಲ್ಲಿ ಆಧಿಕ ಸಾಂದ್ರತೆ ಹತ್ತಿ ಬೆಳೆ ಪದ್ದತಿಯನ್ನು ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ ಕಾಂದೂ ವಿಕ್ಷೀಸಿ ಮಾತನಾಡಿ ಈ ಭಾಗದಲ್ಲಿ ಹತ್ತಿ ಬೆಳೆಯನ್ನು ರೈತರು ಪ್ರಮುಖವಾಗಿ ಬೆಳೆಂಯುತ್ತಾರೆ ಈ ಬಾರಿ ಮಳೆ ಪ್ರಮಾಣ ಕಡಿಮೆಯಾಗಿರುವುದರಿಂದ ಹತ್ತಿ ಬೆಳೆಯ ಇಳುವರಿಯಲ್ಲಿ ಕಡಿಮೆಯಾಗುವ ಸಂಬವವಿರುವುದರಿಂದ ಕೃಷಿ ಇಲಾಖೆಯಿಂದ ರೈತರು ಮಾಹಿತಿ ಪಡೆದುಕೊಂಡು ವೈಜ್ಞಾನಿಕವಾದ ನೂತನ ಕೃಷಿ ಪದ್ದತಿಗಳನ್ನು ರೈತರು ಅಳವಡಿಸಿಕೊಂಡಲ್ಲಿ ಅಧಿಕ ಇಳುವರಿಯನ್ನು ಪಡೆಯುವುದಕ್ಕೆ ಸಾಧ್ಯ.ಕೃಷಿ ಅಧಿಕಾರಿಗಳು ರೈತರು ಅನುಸರಿಸಬೇಕಾದ ಬೇಸಾಯ ಕ್ರಮಗಳ ಬಗ್ಗೆ ಮಾಹಿತಿ ನೀಡುವಂತೆ ಕುರ್ಡಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಭೀಮರಾಯ ಪಡೆದಳ್ಳಿರವರಿಗೆ ಸೂಚಿಸಿದರು.

ತಾಲೂಕು ಪಂಚಾಯತ್ ಇ.ಓ. ಖಾಲೀದ್ ಅಹ್ಮದ್ ,ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರಾದ ದೀಪಾ ಅರಳಿಕಟ್ಟಿ ಸೇರಿದಂತೆ ಕುರ್ಡಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಭೀಮರಾಯ ಪಡೆದಳ್ಳಿ ಇದ್ದರು.

ಮೊದಲನೇ ಪುಟದಿಂದ

# ಬೇಡಿಕೆಗಳಿಗೆ ಸರ್ಕಾರ ಅಸ್ತು: ಪ್ರತಿಭಟನೆ ಹಿಂಪಡೆದ ಕಾಕ್ರೋಚ್ ಜನತಾ ಪಾರ್ಟಿ

ಪರೀಕ್ಷಾ ವ್ಯವಸ್ಥೆಯಲ್ಲಿ ಸುಧಾರಣೆ: ಪೇಪರ್ ಲೀಕ್ ತಡೆಯಲು ಕಠಿಣ ಕಾನೂನು ಮತ್ತು ಶೀಘ್ರ ವಿಚಾರಣಾ ನ್ಯಾಯಾಲಯಗಳ (ಫಾಸ್ಟ್ ಟ್ರ್ಯಾಕ್ ಕೋರ್ಟ್) ಸ್ಥಾಪನೆಗೆ ಕೇಂದ್ರ ಸರ್ಕಾರ ನಿರ್ಧರಿಸಿದೆ.
"ಇದು ಪ್ರಜಾಪ್ರಭುತ್ವಕ್ಕೆ ಸಿಕ್ಕ ಗೆಲುವು": ಸಿಜೆಪಿ

ಸಚಿವರ ರಾಜೀನಾಮೆ ಮತ್ತು ಬೇಡಿಕೆಗಳ ಈಡೇರಿಕೆಯ ಕುರಿತು ಪ್ರತಿಕ್ರಿಯಿಸಿದ ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ಸಂಸ್ಥಾಪಕ ಅಭೀಜಿತ್ ದಿಪ್ಕೆ, "ಇದು ದೇಶದ ಯುವಜನರ ಮತ್ತು ಪ್ರಜಾಪ್ರಭುತ್ವದ ಐತಿಹಾಸಿಕ ಗೆಲುವು" ಎಂದು ಬಣ್ಣಿಸಿದ್ದಾರೆ. "ಜನಸಾಮಾನ್ಯರು ಮತ್ತು ವಿದ್ಯಾರ್ಥಿಗಳು ಸರ್ಕಾರದ ಎದುರು ತಲೆಬಾಗದೆ ಒಗ್ಗಟ್ಟಿನಿಂದ ಹೋರಾಡಿದರೆ ಎಂತಹ ಸುದೀರ್ಘ ಅಧಿಕಾರವನ್ನೂ ಜಗ್ಗಿಸಬಹುದು ಎಂಬುದಕ್ಕೆ ಈ ಹೋರಾಟವೇ ಸಾಕ್ಷಿ" ಎಂದು ಜಂತರ್ ಮಂತರ್‌ನಲ್ಲಿ ನೆರೆದಿದ್ದ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಅವರು ಮಾತನಾಡಿದರು.

ಸರ್ಕಾರವು ತನ್ನ ಭರವಸೆಗಳನ್ನು ಲಿಖಿತ ರೂಪದಲ್ಲಿ ಈಡೇರಿಸಲು ಸಮ್ಮತಿಸಿರುವುದರಿಂದ ದೆಹಲಿಯ ಜಂತರ್ ಮಂತರ್ ಸೇರಿದಂತೆ ವಿವಿಧೆಡೆ ನಡೆಯುತ್ತಿದ್ದ ಪ್ರತಿಭಟನೆಯನ್ನು ಹಿಂಪಡೆಯಲಾಗುತ್ತಿದ್ದು, ವಿದ್ಯಾರ್ಥಿಗಳು ತಮ್ಮ ಅಧ್ಯಯನದತ್ತ ಗಮನಹರಿಸುವಂತೆ ಸಿಜೆಪಿ ಮನವಿ ಮಾಡಿದೆ.

# ಪ್ರಧಾನ್ ರಾಜೀನಾಮೆ

## ವಿದ್ಯಾರ್ಥಿಗಳ ಒತ್ತಡಕ್ಕೆ ಮಣಿದು ಪ್ರಧಾನಿ ಮೋದಿಗೆ ತ್ಯಾಗ ಪತ್ರ ರವಾನೆ

ಆಗ್ರಹಿಸಿ ಹೋರಾಟ ನಡೆಸಿತ್ತು. ವಿದ್ಯಾರ್ಥಿಗಳ ಹೋರಾಟಕ್ಕೆ ಕೊನೆಗೂ ಪ್ರಧಾನಿ ನರೇಂದ್ರ ಮೋದಿಯವರು ಮಣಿದು ಧರ್ಮೇಂದ್ರ ಪ್ರಧಾನ್ ರವರಿಂದ ರಾಜೀನಾಮೆ ಪಡೆದುಕೊಂಡಿದ್ದಾರೆ.
ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಂತರ್ ಮಂತರ್‌ನಲ್ಲಿ ಹೋರಾಟ ನಡೆಸಿದ್ದ ವಿದ್ಯಾರ್ಥಿಗಳು ಧರ್ಮೇಂದ್ರ ಪ್ರಧಾನ್ ರಾಜೀನಾಮೆ ಹಾಗೂ ಪ್ರತಿಭಟನಾನಿರತ ವಿದ್ಯಾರ್ಥಿಗಳ ಮೇಲೆ ಪ್ರಕರಣ ದಾಖಲಿಸಬಾರದು ಹಾಗೂ ನೀಟ್ ಪರೀಕ್ಷೆ ರದ್ದತಿಯ ನಂತರ ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಗಳ ಕುಟುಂಬಕ್ಕೆ ತಲಾ 1 ಕೋಟಿ ಪರಿಹಾರ ನೀಡಬೇಕು ಎಂಬ ಬೇಡಿಕೆಗಳನ್ನಿಟ್ಟು ಹೋರಾಟ ನಡೆಸಿತ್ತು.


ವಿದ್ಯಾರ್ಥಿಗಳ ಬೇಡಿಕೆ ಬಗ್ಗೆ ಕೇಂದ್ರ ಸಚಿವರಾದ ಜೆ.ಪಿ. ನಡ್ಡಾ ಹಾಗೂ ಜಿತೇಂದ್ರ ಸಿಂಗ್ ಇವರುಗಳು ಸಿಜೆಪಿ ಪಕ್ಷದ ವಕ್ತಾರರಾದ ಸೌರವ್ ದಾಸ್ ಮತ್ತು ಅಸುತೋಷ್ ರಾಂಕ ಇವರುಗಳು ನಿನ್ನೆ ಮತ್ತು ಮೊನ್ನೆ 2 ಸುತ್ತಿನ ಮಾತುಕತೆ ನಡೆಸಿ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ಹೊರತುಪಡಿಸಿ ಉಳಿದ 2 ಬೇಡಿಕೆ ಈಡೇರಿಕೆಗೆ ಸಮ್ಮತಿಸಿತ್ತು.
ಆದರೆ ಸಿಜೆಪಿ ಪಕ್ಷ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡದ ಹೊರತು ಮಾತುಕತೆಗೆ ಅರ್ಥವಿಲ್ಲ ಎಂದು ಹೇಳಿ, ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಬಿಗಿ ಪಟ್ಟು ಹಾಕಿತ್ತು.
ವಿದ್ಯಾರ್ಥಿಗಳ ಬಿಗಿ ಪಟ್ಟಿಗೆ, ಹೋರಾಟಕ್ಕೆ ಮಣಿದು ಕೊನೆಗೂ ಧರ್ಮೇಂದ್ರ ಪ್ರಧಾನ್ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಇಂದು ಸಹ ಕೇಂದ್ರ ಸರ್ಕಾರ ಸಿಜೆಪಿ ಪಕ್ಷದ ಪ್ರತಿನಿಧಿಗಳ ಜತೆ 3ನೇ ಸುತ್ತಿನ ಮಾತುಕತೆ ನಿಗದಿ ಮಾಡಿತ್ತು. ಈ 3ನೇ ಸುತ್ತಿನ ಮಾತುಕತೆಗೂ ಮೊದಲೇ ಧರ್ಮೇಂದ್ರ ಪ್ರಧಾನ್ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಇದರಿಂದಾಗಿ ನೀಟ್ ಅಕ್ರಮಕ್ಕೆ ಸಂಬಂಧಿಸಿದಂತೆ ವಿದ್ಯಾರ್ಥಿಗಳು ಮತ್ತು ಕೇಂದ್ರ ಸರ್ಕಾರದ ನಡುವೆ ನಡೆದಿದ್ದ ಹಲವು ದಿನಗಳ ಸಂಘರ್ಷಕ್ಕೆ ತೆರೆ ಬಿದ್ದಂತಾಗಿದೆ.

ದೇಶದ ಐಕ್ಯತೆ ಉಳಿಸಲು ರಾಜೀನಾಮೆ
ದೆಹಲಿಯ ಜಂತರ್ ಮಂತರ್ ನಲ್ಲಿ ಕಳೆದ ಹತ್ತು ದಿನಗಳಿಂದ ನಡೆದಿರುವ ಪರಿಸ್ಥಿತಿಯ ಲಾಭವನ್ನು ದೇಶ ವಿರೋಧಿ ಶಕ್ತಿಗಳು ಪಡೆದುಕೊಳ್ಳಬಾರದು ದೇಶದ ಏಕತೆ ಐಕ್ಯತೆ ಉಳಿಯಬೇಕು ಎಂಬುದನ್ನು ಗಮನದಲ್ಲಿಟ್ಟುಕೊಂಡು ರಾಜೀನಾಮೆ ನಿರ್ಧಾರ ಕೈಗೊಂಡಿರುವುದಾಗಿ ಧರ್ಮೇಂದ್ರ ಪ್ರಧಾನ ತಿಳಿಸಿದ್ದಾರೆ. ಧರ್ಮೇಂದ್ರ ಪ್ರಧಾನ ಪ್ರತಿಕ್ರಿಯೆ ಪ್ರಧಾನಿ ನರೇಂದ್ರ ಮೋದಿಯವರಿಗೆ ರಾಜೀನಾಮೆ ಪತ್ರವನ್ನು ರವಾನಿಸಿರುವ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ನಾನು ನನ್ನ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿದ್ದೇನೆ ಎಂದು ಉಲ್ಲೇಖಿಸಿ ನನ್ನ ವೃತ್ತಿ ಜೀವನದತ್ತ ಗಮನ ಹರಿಸಬೇಕು ಎಂಬುದನ್ನು ಪರಿಗಣಿಸಿ ನಾನು ನನ್ನ ರಾಜೀನಾಮೆಯನ್ನು ಗೌರವಾನ್ವಿತ ಪ್ರಧಾನಮಂತ್ರಿಯವರಿಗೆ ಕಳುಹಿಸಿದ್ದೇನೆ ಎಂದು ಹೇಳಿದ್ದಾರೆ. ಕಳೆದ ಹತ್ತು ದಿನಗಳ ಬೆಳವಣಿಗೆಯನ್ನು ನೋಡಿ ನನ್ನ ಮನಸ್ಸಿಗೆ ದುಃಖವಾಗಿದೆ ಇದು ನನಗೆ ವೈಯಕ್ತಿಕ ವಿಷಯವಾಗಿರಲಿಲ್ಲ ಭಾರತದಲ್ಲಿ ಯುವಶಕ್ತಿಯೇ ಈ ದೇಶದ ನಿಜವಾದ ಶಕ್ತಿ ದೇಶದ ಯುವಶಕ್ತಿಯನ್ನು ಭ್ರಮೆಯ ಸುಳಿಯಲ್ಲಿ ಸಿಲುಕಿಸಲು ಬಿಡಬಾರದು ಎಂಬುದು ನನ್ನ ಸಂಕಲ್ಪವಾಗಿದೆ ಎಂದು ಅವರು ಹೇಳಿದ್ದಾರೆ

ವಿಡಿಯೋಗೆ ಉತ್ತಮ ಸ್ಪಂದನೆ : ಮೋದಿ ಕೃತಜ್ಞತೆ
ಪ್ರಶ್ನೆಪತ್ರಿಕೆ ಸೋರಿಕೆಯನ್ನು ತಡೆಯಲು ಸರ್ಕಾರ ತೆಗೆದುಕೊಂಡಿರುವ ಯೋಜಿತ ಕ್ರಮದ ಕುರಿತು ತಮ್ಮ ಇನ್‌ಸ್ಟಾಗ್ರಾಮ್ ವೀಡಿಯೊಗೆ ಸಕಾರಾತ್ಮಕ ಪ್ರತಿಕ್ರಿಯೆ ನೀಡಿದ್ದಕ್ಕಾಗಿ ಯುವಜನತೆಗೆ ಪ್ರಧಾನಿ ನರೇಂದ್ರ ಮೋದಿ ಕೃತಜ್ಞತೆ ಸಲ್ಲಿಸಿದ್ದಾರೆ.
ಧನ್ಯವಾದಗಳು ಸ್ನೇಹಿತರೇ. ನಿನ್ನೆ ರಾತ್ರಿ ನಿಮ್ಮನ್ನು ಭೇಟಿ ಮಾಡುವ ಅವಕಾಶ ನನಗೆ ಸಿಕ್ಕಿತು. ನೀವು ವೀಡಿಯೊಗೆ ಪ್ರತಿಕ್ರಿಯಿಸಿದ ರೀತಿ, ಸಕಾರಾತ್ಮಕ ಸಲಹೆಗಳನ್ನು ಕಳುಹಿಸಿದ್ದೀರಿ. ಎಲ್ಲರಿಗೂ ಧನ್ಯವಾದಗಳು ಎಂದು ಅವರು ಇನ್‌ಸ್ಟಾಗ್ರಾಮ್‌ನಲ್ಲಿ ಮೋದಿ ತಿಳಿಸಿದ್ದಾರೆ.
ಮೊದಲ ವಿಡಿಯೋ ನೋಡಿದ ಲಕ್ಷಾಂತರ ಯುವಕರು ಪರೀಕ್ಷಾ ಪದ್ಧತಿಯನ್ನು ಸುಧಾರಿಸಲು ಸೋಶಿಯಲ್ ಮಿಡೀಯಾದಲ್ಲಿ ಹಂಚಿಕೊಂಡಿರುವ ಸಲಹೆಗಳು ಮತ್ತು ಪ್ರಮುಖ ಐಡಿಯಾಗಳನ್ನು ಗಮನಿಸಿದ್ದೇನೆ.
ಪೇಪರ್ ಸೋರಿಕೆ ದಂಧೆಯ ವಿರುದ್ಧ ಸರ್ಕಾರ ತೆಗೆದುಕೊಳ್ಳಲಿರುವ ಕಠಿಣ ಕ್ರಮಗಳಿಗೆ ದೇಶದ ಯುವ ಪೀಳಿಗೆ ತೋರಿರುವ ಬೆಂಬಲವೇ ತಮಗೆ ದೊಡ್ಡ ಶಕ್ತಿ. ತಡರಾತ್ರಿ ಹಂಚಿಕೊಂಡ ವಿಡಿಯೋ ಮೂಲಕ ದೇಶದ ಯುವ ಸಮುದಾಯದೊಂದಿಗೆ ನೇರವಾಗಿ ಸಂಪರ್ಕಿಸಲು ಸಾಧ್ಯವಾಗಿದ್ದು ತಮಗೆ ಹೆಮ್ಮೆ ತಂದಿದೆ. ಯುವಕರ ಅಭಿಪ್ರಾಯಗಳನ್ನು ಸರ್ಕಾರವು ಅತ್ಯಂತ ಗಂಭೀರವಾಗಿ ಪರಿಗಣಿಸಲಿದೆ. ಪರೀಕ್ಷಾ ವ್ಯವಸ್ಥೆಯನ್ನು ಸಂಪೂರ್ಣ ಪಾರದರ್ಶಕವಾಗಿ ಮುಂದುವರಿಸಲು ಯುವಜನತೆಯ ಈ ನಿರಂತರ ಸಂವಾದ ಅಗತ್ಯ ಎಂದು ಮೋದಿ ಹೇಳಿದ್ದಾರೆ.

# ಕಾರ್ಗಿಲ್ ವಿಜಯ್ ದಿವಸ್: ನಮ್ಮ ಯೋಧರ ತ್ಯಾಗಕ್ಕೆ ಸರಿಸಾಟಿ ಯಾರು?

ನಮ್ಮ ಇಂದಿನ ಸುಖನಿದ್ರೆಗೆ ಗಡಿಯಲ್ಲಿ ಕಣ್ಣು ರೆಪ್ಪೆ ಮುಚ್ಚದೆ ಕಾವಲು ಕಾಯುತ್ತಿರುವ ಯೋಧರ ತ್ಯಾಗಕ್ಕೆ ಬೆಲೆ ಕಟ್ಟಲು ಸಾಧ್ಯವೇ?




ಪ್ರತಿ ವರ್ಷ ಜುಲೈ 26 ರಂದು ಭಾರತವು ಕಾರ್ಗಿಲ್ ವಿಜಯ್ ದಿವಸ್ ಅನ್ನು ಆಚರಿಸುತ್ತದೆ. 1999ರಲ್ಲಿ ಜಮ್ಮು-ಕಾಶ್ಮೀರದ ಕಾರ್ಗಿಲ್ ಪ್ರದೇಶದಲ್ಲಿ ನಡೆದ ಯುದ್ಧದಲ್ಲಿ ಭಾರತೀಯ ಸೇನೆಯ ಯೋಧರು ಅಪಾರ ಶೌರ್ಯ, ಧೈರ್ಯ ಹಾಗೂ ದೇಶಪ್ರೇಮವನ್ನು ಪ್ರದರ್ಶಿಸಿ ವಿಜಯ ಸಾಧಿಸಿದರು.


ಈ ದಿನವನ್ನು ಕೇವಲ ವಿಜಯದ ಸಂಕೇತವಾಗಿ ಮಾತ್ರ ಆಚರಿಸುವುದಿಲ್ಲ; ದೇಶಕ್ಕಾಗಿ ತಮ್ಮ ಪ್ರಾಣವನ್ನೇ ಅರ್ಪಿಸಿದ ಅಮರ ವೀರಯೋಧರನ್ನು ಸ್ಮರಿಸುವ ಪವಿತ್ರ ದಿನವಾಗಿಯೂ ಆಚರಿಸುತ್ತೇವೆ.ಹಿಮದಿಂದ ಆವೃತವಾದ ಕಾರ್ಗಿಲ್‌ನ ದುರ್ಗಮ ಪರ್ವತಗಳಲ್ಲಿ, ಕಡುಚಳಿಯನ್ನೂ ಲೆಕ್ಕಿಸದೆ ಶತ್ರುಗಳ ವಿರುದ್ಧ ಹೋರಾಡಿ ವೀರಮರಣ ಹೊಂದಿದ ನಮ್ಮ ಯೋಧರಿಗೆ ನನ್ನ ಕೋಟಿ ಕೋಟಿ ನಮನಗಳು.

ಅವರ ತ್ಯಾಗ ಮತ್ತು ಬಲಿದಾನದಿಂದಲೇ ಇಂದು ನಾವು ಸ್ವತಂತ್ರವಾಗಿ, ಸುರಕ್ಷಿತವಾಗಿ ಹಾಗೂ ನೆಮ್ಮದಿಯಿಂದ ಬದುಕಲು ಸಾಧ್ಯವಾಗಿದೆ.ಕಾರ್ಗಿಲ್ ಯುದ್ಧವು ನಮಗೆ ದೇಶಭಕ್ತಿ, ಏಕತೆ, ಕರ್ತವ್ಯನಿಷ್ಠೆ ಮತ್ತು "ಒಗ್ಗಟ್ಟಿನಲ್ಲಿ ಬಲವಿದೆ" ಎಂಬ ಮಹತ್ವದ ಸಂದೇಶವನ್ನು ನೀಡುತ್ತದೆ.
ಯೋಧರನ್ನು ನೆನೆಯುವುದಷ್ಟೇ ಅಲ್ಲ, ಅವರ ಕುಟುಂಬಗಳಿಗೂ ಗೌರವ ನೀಡುವುದು ನಮ್ಮ ಕರ್ತವ್ಯ. ದೇಶದ ಬಗ್ಗೆ ಜವಾಬ್ದಾರಿಯುತ ನಾಗರಿಕರಾಗಿ ಬದುಕುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವ.

ಹೇಗೆ ಪ್ರತಿಯೊಂದು ಮನೆಯನ್ನೂ ತಂದೆ ರಕ್ಷಿಸುತ್ತಾರೋ, ಅದೇ ರೀತಿ ನಮ್ಮ ಸೈನಿಕರು ತಮ್ಮ ಕುಟುಂಬವನ್ನು ಬಿಟ್ಟು, ಹಗಲು-ರಾತ್ರಿ, ನಿದ್ರೆಯನ್ನೂ ಲೆಕ್ಕಿಸದೆ, "ದೇಶಸೇವೆಯೇ ನಮ್ಮ ಧರ್ಮ" ಎಂಬ ಸಂಕಲ್ಪದೊಂದಿಗೆ ಗಡಿಯಲ್ಲಿ ನಮ್ಮನ್ನು ರಕ್ಷಿಸುತ್ತಿದ್ದಾರೆ. ಅಂತಹ ನಿಸ್ವಾರ್ಥ ಯೋಧರಿಗೆ ನನ್ನ ಹೃದಯಪೂರ್ವಕ ನಮನಗಳು.
ಒಂದು ದಿನ ಮಾತ್ರ ಅವರನ್ನು ನೆನಪಿಸಿ ಕೃತಜ್ಞತೆ ಸಲ್ಲಿಸಿದರೆ ಸಾಕಾಗುವುದಿಲ್ಲ. ನಮ್ಮ ಪ್ರತಿಯೊಂದು ಪ್ರಾರ್ಥನೆಯಲ್ಲೂ ನಮ್ಮ ಸೈನಿಕರ ಸುರಕ್ಷತೆ, ಆರೋಗ್ಯ ಮತ್ತು ದೇಶದ ಶಾಂತಿಗಾಗಿ ಪ್ರಾರ್ಥಿಸೋಣ.ಕಾರ್ಗಿಲ್ ಯುದ್ಧದಲ್ಲಿ ಹುತಾತ್ಮರಾದ ಎಲ್ಲ ವೀರಯೋಧರಿಗೆ ಭಾವಪೂರ್ಣ ನಮನಗಳು. ಅವರ ದೇಶಪ್ರೇಮ, ತ್ಯಾಗ ಮತ್ತು ದೇಶಸೇವೆ ಮುಂದಿನ ಪೀಳಿಗೆಗೆ ಸದಾ ಪ್ರೇರಣೆಯಾಗಿರಲಿ.

ಗಡಿಯಲ್ಲಿ ಯೋಧರ ಕಾವಲು,
ಮನೆಯಲ್ಲಿ ತಂದೆಯ ಕಾವಲು
ಇರುವ ತನಕ ನಮ್ಮೆಲ್ಲರ ಜೀವನ ನೆಮ್ಮದಿ ಮತ್ತು ಸುರಕ್ಷಿತವಾಗಿರುತ್ತದೆ.

ಜೈ ಹಿಂದ್!
ಜೈ ಭಾರತ್!




ಲೇಖನ:ಗಂಗಾ

# ಶಾಂತಿ ಮತ್ತು ಪಟ್ಟುಹಿಡಿದ ಹೋರಾಟಕ್ಕೆ ದೊರೆತ ಜಯ: 'ಜೆನ್ ಜಿ' ಪ್ರತಿಭಟನಾಕಾರರನ್ನು ಶ್ಲಾಘಿಸಿದ ಸೋನಮ್ ವಾಂಗ್ಚುಕ್

**ನವದೆಹಲಿ, ಜುಲೈ 25–** ದೇಶದ ಶಿಕ್ಷಣ ವ್ಯವಸ್ಥೆಯಲ್ಲಿ ಪಾರದರ್ಶಕತೆ, ಪರೀಕ್ಷಾ ಪ್ರಶ್ನೆಪತ್ರಿಕೆ ಸೋರಿಕೆ ತಡೆ ಹಾಗೂ ಸಮಗ್ರ ಸುಧಾರಣೆಗಳನ್ನು ಆಗ್ರಹಿಸಿ ನಡೆಸಲಾಗುತ್ತಿದ್ದ ಬೃಹತ್ ಹೋರಾಟವು ಹೊಸ ಹಂತ ತಲುಪಿದೆ. 26 ದಿನಗಳ ಕಾಲ ಸತತ ಉಪವಾಸ ಸತ್ಯಾಗ್ರಹ ನಡೆಸಿದ್ದ ಪ್ರಸಿದ್ಧ ಶಿಕ್ಷಣ ತಜ್ಞ ಹಾಗೂ ಸಾಮಾಜಿಕ ಹೋರಾಟಗಾರ ಸೋನಮ್ ವಾಂಗ್ಚುಕ್ ಅವರು ತಮ್ಮ ಸತ್ಯಾಗ್ರಹವನ್ನು ಕೊನೆಗೊಳಿಸಿದ್ದು, ಈ ಯಶಸ್ಸನ್ನು ದೇಶದ 'ಜೆನ್ ಜಿ' ಯುವಜನರ ಅಹಿಂಸಾತ್ಮಕ ಹೋರಾಟಕ್ಕೆ ಅರ್ಪಿಸಿದ್ದಾರೆ.
26 ದಿನಗಳ ಸುದೀರ್ಘ ಉಪವಾಸ ಸತ್ಯಾಗ್ರಹ ಅಂತ್ಯ
ಜಂತರ್ ಮಂತರ್‌ನಲ್ಲಿ ಧರಣಿ ನಡೆಸುತ್ತಿದ್ದ ಸೋನಮ್ ವಾಂಗ್ಚುಕ್ ಅವರಿಗೆ ಕೇಂದ್ರ ಸರ್ಕಾರದಿಂದ ಲಿಖಿತ ಭರವಸೆ ದೊರೆತ ನಂತರ ಅವರು ನಿರಹಾರ ಸತ್ಯಾಗ್ರಹವನ್ನು ಹಿಂಪಡೆದಿದ್ದಾರೆ. ಪರೀಕ್ಷಾ ಪದ್ಧತಿಯಲ್ಲಿ ಸುಧಾರಣೆ, ಪ್ರಮುಖ ಶೈಕ್ಷಣಿಕ ವಿಚಾರಗಳ ಕುರಿತು ಸಂಸತ್ತಿನಲ್ಲಿ ಚರ್ಚೆ ಹಾಗೂ ಶಾಂತಿಯುತವಾಗಿ ಪ್ರತಿಭಟನೆ ನಡೆಸಿದ ವಿದ್ಯಾರ್ಥಿಗಳ ವಿರುದ್ಧ ಯಾವುದೇ ಕಾನೂನು ಕ್ರಮ ಜರುಗಿಸುವುದಿಲ್ಲ ಎಂದು ಕೇಂದ್ರ ಸರ್ಕಾರ ಭರವಸೆ ನೀಡಿದೆ.

"ಇದು ಶಾಂತಿ ಮತ್ತು ಪಟ್ಟುಹಿಡಿದ ನಿರಂತರ ಹೋರಾಟಕ್ಕೆ ಸಿಕ್ಕ ಜಯ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜವಾಬ್ದಾರಿಯನ್ನು ಮರುಸ್ಥಾಪಿಸಲು ಯುವಜನರು ತೋರಿದ ಬದ್ಧತೆ ಶ್ಲಾಘನೀಯ."
ಸೋನಮ್ ವಾಂಗ್ಚುಕ್

'ಜೆನ್ ಜಿ' ಯುವಪಡೆಯ ಅಭೂತಪೂರ್ವ ಬೆಂಬಲ



ಪ್ರಶ್ನೆಪತ್ರಿಕೆ ಸೋರಿಕೆಯಿಂದಾಗಿ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ಅನಿಶ್ಚಿತತೆಗೆ ಸಿಲುಕಿದಾಗ, ದೇಶಾದ್ಯಂತ 'ಜೆನ್ ಜಿ' ಯುವಕರು ಬೀದಿಗಿಳಿದು ಧ್ವನಿ ಎತ್ತಿದ್ದರು. ವಾಂಗ್ಚುಕ್ ಅವರ ಸತ್ಯಾಗ್ರಹಕ್ಕೆ ಯುವಜನರು ನೀಡಿದ ಭಾರಿ ಬೆಂಬಲವೇ ಕೇಂದ್ರ ಸರ್ಕಾರವು ಮಾತುಕತೆಗೆ ಬರಲು ಮುಖ್ಯ ಕಾರಣವಾಯಿತು. ದೇಶದ ನಾನಾ ಭಾಗಗಳಿಂದ ಆಗಮಿಸಿದ್ದ ಯುವ ಪ್ರತಿಭಟನಾಕಾರರು ನಾಯಕತ್ವ ವಹಿಸಿ ಜಾಗೃತಿ ಮೂಡಿಸಿದ್ದರು.
ಶಿಕ್ಷಣ ಸಚಿವರ ರಾಜೀನಾಮೆಗೆ ಪಟ್ಟು ಮುಂದುವರಿಕೆ
ಕೇಂದ್ರ ಸರ್ಕಾರದಿಂದ ಭರವಸೆ ಸಿಕ್ಕ ನಂತರ ವಾಂಗ್ಚುಕ್ ಅವರು ಉಪವಾಸ ಹಿಂಪಡೆದಿದ್ದರೂ, ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ಆಗ್ರಹಿಸಿ ಯುವ ಸಂಘಟನೆಗಳು ಪ್ರತಿಭಟನೆಯನ್ನು ಮುಂದುವರಿಸಲು ನಿರ್ಧರಿಸಿವೆ. ಶಿಕ್ಷಣ ಕ್ಷೇತ್ರದಲ್ಲಿ ಆದ ಲೋಪದೋಷಗಳಿಗೆ ಹೊಣೆಗಾರಿಕೆ ನಿಗದಿಯಾಗಬೇಕು ಮತ್ತು ಶಿಕ್ಷಣ ಸಚಿವರು ರಾಜೀನಾಮೆ ನೀಡಬೇಕು ಎಂಬ ಬೇಡಿಕೆಯಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು 'ಜೆನ್ ಜಿ' ಪ್ರತಿಭಟನಾಕಾರರು ಸ್ಪಷ್ಟಪಡಿಸಿದ್ದಾರೆ

# "ಸುಬಹ್ ಹೋ ಗಯಿ ಮಾಮೂ!": ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ "ಪ್ರಜಾಪ್ರಭುತ್ವದ ಮುಂಜಾವು" ಎಂದ ಸಿಜೆಪಿ ನಾಯಕ ಅಭೀಜಿತ್ ದೀಪ್ಕೆ

**ನವದೆಹಲಿ, ಜುಲೈ 25–** ಪರೀಕ್ಷಾ ಅಕ್ರಮ ಹಾಗೂ ನೀಟ್ ಗೊಂದಲಗಳ ಹಿನ್ನೆಲೆಯಲ್ಲಿ ದೇಶಾದ್ಯಂತ ಭುಗಿಲೆದ್ದಿದ್ದ ವಿದ್ಯಾರ್ಥಿ ದಂಗೆಗೆ ಕೊನೆಗೂ ಮಣಿದ ಕೇಂದ್ರ ಸರ್ಕಾರ; ಪ್ರಧಾನಿ ಮೋದಿಯವರ ವಿರುದ್ಧ ತೀಕ್ಷ್ಣ ವಾಗ್ದಾಳಿ ನಡೆಸಿದ ಕಾಕ್ರೋಚ್ ಜನತಾ ಪಾರ್ಟಿ.

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ನಡೆಸಿದ ಪರೀಕ್ಷೆಗಳಲ್ಲಿ ಸರಣಿ ಅಕ್ರಮಗಳು, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ಶಿಕ್ಷಣ ವ್ಯವಸ್ಥೆಯಲ್ಲಿನ ವೈಫಲ್ಯಗಳನ್ನು ಖಂಡಿಸಿ ದೇಶಾದ್ಯಂತ ಕಳೆದೆರಡು ವಾರಗಳಿಂದ ಕಾವೇರಿದ್ದ ವಿದ್ಯಾರ್ಥಿ ಹೋರಾಟಕ್ಕೆ ಕೊನೆಗೂ ಬೃಹತ್ ಜಯ ಸಿಕ್ಕಿದೆ. ತೀವ್ರ ಸಾರ್ವಜನಿಕ ಒತ್ತಡ ಹಾಗೂ ಪ್ರತಿಭಟನೆಗಳ ಹಿನ್ನೆಲೆಯಲ್ಲಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ತಮ್ಮ ಹುದ್ದೆಗೆ ರಾಜೀನಾಮೆ ನೀಡಿದ್ದಾರೆ.

"ಸುಬಹ್ ಹೋ ಗಯಿ ಮಾಮೂ!": ದೀಪ್ಕೆ ತೀಕ್ಷ್ಣ ಲೇವಡಿ
ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆ ವರದಿ ಹೊರಬೀಳುತ್ತಿದ್ದಂತೆಯೇ, ವಿದ್ಯಾರ್ಥಿ ಹೋರಾಟದ ಮುಂಚೂಣಿಯಲ್ಲಿದ್ದ ಕಾಕ್ರೋಚ್ ಜನತಾ ಪಾರ್ಟಿ ಸಂಸ್ಥಾಪಕ ಹಾಗೂ 30 ವರ್ಷದ ಯುವ ನಾಯಕ ಅಭೀಜಿತ್ ದೀಪ್ಕೆ ಹರ್ಷ ವ್ಯಕ್ತಪಡಿಸಿದ್ದಾರೆ. ಪ್ರಸಿದ್ಧ 'ಮುನ್ನಾಭಾಯ್ ಎಂ.ಬಿ.ಬಿ.ಎಸ್' ಚಲನಚಿತ್ರದ ಶೈಲಿಯಲ್ಲಿ "ಸುಬಹ್ ಹೋ ಗಯಿ ಮಾಮೂ!" (ಬೆಳಗಾಯಿತು ಮಾಮೂ!) ಎಂದು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರಕ್ಕೆ ತೀಕ್ಷ್ಣವಾಗಿ ಲೇವಡಿ ಮಾಡಿದ್ದಾರೆ.

"ನಾವು ಅಂದುಕೊಂಡಿದ್ದನ್ನು ಸಾಧಿಸಿದ್ದೇವೆ! ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಿದ್ದಾರೆ. ಇದು ದೇಶದ ಕೋಟ್ಯಂತರ ವಿದ್ಯಾರ್ಥಿಗಳ ಹಾಗೂ ಸತ್ಯದ ಜಯ. ಇದು ಭಾರತೀಯ ಪ್ರಜಾಪ್ರಭುತ್ವದ ಹೊಸ ಮುಂಜಾವು."
ಅಭೀಜಿತ್ ದೀಪ್ಕೆ, ಸಂಸ್ಥಾಪಕ, ಸಿಜೆಪಿ.

ಪ್ರಧಾನಿ ಮೋದಿಯವರಿಗೆ ತೀಕ್ಷ್ಣ ವಾಗ್ದಾಳಿ: ಕೇಂದ್ರ ಸರ್ಕಾರದ ಧೋರಣೆಯನ್ನು ತೀವ್ರವಾಗಿ ಟೀಕಿಸಿದ ದೀಪ್ಕೆ, ದೇಶದ ಯುವಜನತೆಯ ಭವಿಷ್ಯದೊಂದಿಗೆ ಚೆಲ್ಲಾಟವಾಡುತ್ತಿದ್ದ ಸರ್ಕಾರಕ್ಕೆ ಈಗ ಕಣ್ಣು ತೆರೆದಿದೆ ಎಂದಿದ್ದಾರೆ. ಸರ್ಕಾರ ಆರಂಭದಲ್ಲಿ ವಿದ್ಯಾರ್ಥಿಗಳ ಧ್ವನಿಯನ್ನು ಹತೋಟಿಗೆ ತರಲು ಶ್ರಮಿಸಿತು, ಆದರೆ ಪ್ರಜಾಪ್ರಭುತ್ವದಲ್ಲಿ ಜನರ ಮತ್ತು ಯುವಕರ ಶಕ್ತಿಯೇ ಅಂತಿಮ ಎಂಬುದು ಮತ್ತೊಮ್ಮೆ ಸಾಬೀತಾಗಿದೆ ಎಂದು ಹೇಳಿದರು. ಪ್ರಧಾನಿಯವರು ಸಚಿವರ ರಾಜೀನಾಮೆಯನ್ನು ಅಂಗೀಕರಿಸುವ ಮೂಲಕ ತಮ್ಮ ಆಡಳಿತ ವೈಫಲ್ಯವನ್ನು ಪರೋಕ್ಷವಾಗಿ ಒಪ್ಪಿಕೊಂಡಿದ್ದಾರೆ ಎಂದು ವ್ಯಂಗ್ಯವಾಡಿದರು.
ಮುಖ್ಯ ಬೇಡಿಕೆಗಳು ಹಾಗೂ ಹೋರಾಟದ ಮುಂದುವರಿಕೆ:
ಅಧಿಕಾರಿಗಳ ವಿರುದ್ಧ ಕ್ರಮ: ಪರೀಕ್ಷಾ ಅಕ್ರಮಗಳಲ್ಲಿ ಭಾಗಿಯಾದ ಮತ್ತು ಕರ್ತವ್ಯ ಲೋಪ ಎಸಗಿದ ಅಧಿಕಾರಿಗಳ ಮೇಲೆ ತಕ್ಷಣವೇ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು.

ಪೋಲಿಸ್ ದೌರ್ಜನ್ಯ ತಡೆಯುವುದು: ಪ್ರತಿಭಟನಾ ನಿರತ ವಿದ್ಯಾರ್ಥಿಗಳ ಮೇಲೆ ದೌರ್ಜನ್ಯ ಎಸಗಿದ ಪೊಲೀಸ್ ಅಧಿಕಾರಿಗಳನ್ನು ತಕ್ಷಣ ಅಮಾನತುಗೊಳಿಸಬೇಕು.

ಪರಿಹಾರ ಘೋಷಣೆ: ಪರೀಕ್ಷಾ ಅಕ್ರಮ ಹಾಗೂ ಮಾನಸಿಕ ಒತ್ತಡದಿಂದ ಆತ್ಮಹತ್ಯೆಗೆ ಶರಣಾದ ವಿದ್ಯಾರ್ಥಿಗಳ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕು.

ಪ್ರತಿಭಟನೆ ಇಲ್ಲಿಗೆ ಮುಗಿಯುವುದಿಲ್ಲ: ಸಿಜೆಪಿ ಎಚ್ಚರಿಕೆ
ಶಿಕ್ಷಣ ಸಚಿವರ ರಾಜೀನಾಮೆ ಸಣ್ಣ ಜಯವಷ್ಟೇ ಎಂದು ಸ್ಪಷ್ಟಪಡಿಸಿದ ಅಭೀಜಿತ್ ದೀಪ್ಕೆ, ಪರೀಕ್ಷಾ ವ್ಯವಸ್ಥೆಯಲ್ಲಿ ಸಮಗ್ರ ಸುಧಾರಣೆ ತರುವವರೆಗೆ ಮತ್ತು ಸಂಕಷ್ಟಕ್ಕೆ ಸಿಲುಕಿದ



ವಿದ್ಯಾರ್ಥಿಗಳಿಗೆ ನ್ಯಾಯ ಸಿಗುವವರೆಗೆ ಜಂತರ್ ಮಂತರ್ ಹಾಗೂ ದೇಶದ ವಿವಿಧ ಭಾಗಗಳಲ್ಲಿ ನಡೆಯುತ್ತಿರುವ ವಿದ್ಯಾರ್ಥಿ ಪ್ರತಿಭಟನೆ ಮುಂದುವರಿಯಲಿದೆ ಎಂದು ಎಚ್ಚರಿಸಿದ್ದಾರೆ.

ಧೈರ್ಯದ ದಾರಿ

ಭಾನುವಾರ: 26-07-2026

## ಕಾರಜೋಳ ವಸತಿ ಶಾಲೆಯಲ್ಲಿ ಮಕ್ಕಳೊಂದಿಗೆ ಊಟ ಮಾಡಿದ ಜಿಲ್ಲಾಧಿಕಾರಿ



**ವಿಜಯಪುರ, ಜು. 25:** ವಿದ್ಯಾರ್ಥಿಗಳ ಶಿಕ್ಷಣ, ಆರೋಗ್ಯ ಹಾಗೂ ಸುರಕ್ಷತೆಗೆ ಸಂಬಂಧಿಸಿದ ಯಾವುದೇ ವಿಷಯದಲ್ಲಿ ನಿರ್ಲಕ್ಷ್ಯ ಸಲ್ಲದು ಎಂಬ ಸ್ಪಷ್ಟ ಸಂದೇಶ ನೀಡಿದ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಶುಕ್ರವಾರ ಕಾರಜೋಳದ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗೆ ಅನಿರೀಕ್ಷಿತ ಭೇಟಿ ನೀಡಿ ಶೈಕ್ಷಣಿಕ ಚಟುವಟಿಕೆಗಳು, ವಸತಿ ವ್ಯವಸ್ಥೆ, ಆಹಾರದ ಗುಣಮಟ್ಟ ಹಾಗೂ ಮೂಲಸೌಕರ್ಯಗಳ ಸಮಗ್ರ ಪರಿಶೀಲನೆ ನಡೆಸಿದರು.

ಭೇಟಿಯ ವೇಳೆ ವಿದ್ಯಾರ್ಥಿಗಳೊಂದಿಗೆ ಮುಕ್ತವಾಗಿ ಬೆರೆತ ಜಿಲ್ಲಾಧಿಕಾರಿಗಳು, ಅವರ ಪಕ್ಕದಲ್ಲೇ ಕುಳಿತು ಮಧ್ಯಾಹ್ನದ ಊಟ ಮಾಡಿ ಆಹಾರದ ಗುಣಮಟ್ಟವನ್ನು ಸ್ವತಃ ಪರಿಶೀಲಿಸಿದರು. ಬಳಿಕ ವಿದ್ಯಾರ್ಥಿಗಳ ಆರೋಗ್ಯ, ಕಲಿಕೆ, ವಸತಿ, ಸ್ವಚ್ಛತೆ ಹಾಗೂ ದೈನಂದಿನ ಸಮಸ್ಯೆಗಳ ಕುರಿತು ಮಾಹಿತಿ ಪಡೆದು, ಅವುಗಳ ತ್ವರಿತ ಪರಿಹಾರಕ್ಕೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಂತರ ಪ್ರಾಚಾರ್ಯರು, ನಿಲಯ ಪಾಲಕರು ಹಾಗೂ ಶಿಕ್ಷಕರೊಂದಿಗೆ ಸಭೆ ನಡೆಸಿದ ಅವರು, ವಸತಿ ಶಾಲೆಗಳು ಕೇವಲ ಶಿಕ್ಷಣ ನೀಡುವ ಕೇಂದ್ರಗಳಲ್ಲ; ಮಕ್ಕಳ ವ್ಯಕ್ತಿತ್ವ ಹಾಗೂ ಭವಿಷ್ಯ ರೂಪಿಸುವ ಪ್ರಮುಖ ಸಂಸ್ಥೆಗಳಾಗಿವೆ. ಇಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಗೂ ಗುಣಮಟ್ಟದ ಶಿಕ್ಷಣ, ಪೌಷ್ಟಿಕ ಆಹಾರ, ಸುರಕ್ಷಿತ ವಸತಿ ಮತ್ತು ಕಾಳಜಿಯ ಆರೈಕೆ ದೊರೆಯಬೇಕು ಎಂದು ಹೇಳಿದರು.

ಸರ್ಕಾರ ನಿಗದಿಪಡಿಸಿರುವ ಮೆನ್ಯೂಗೆ ಅನುಗುಣವಾಗಿ ಪ್ರತಿದಿನ ಗುಣಮಟ್ಟದ ಉಪಹಾರ ಹಾಗೂ ಊಟ ನೀಡಬೇಕು. ಆಹಾರದ ಗುಣಮಟ್ಟದಲ್ಲಿ ಯಾವುದೇ ರೀತಿಯ ರಾಜಿ ಮಾಡಿಕೊಳ್ಳಬಾರದು. ನಿಲಯ ಪಾಲಕರು, ಪ್ರಾಚಾರ್ಯರು ಹಾಗೂ ಶಿಕ್ಷಕರು ನಿರಂತರ ಮೇಲ್ವಿಚಾರಣೆ ನಡೆಸಿ ವಿದ್ಯಾರ್ಥಿಗಳ ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಶಾಲೆಯಲ್ಲಿ ಸ್ವಚ್ಛತೆ ಮತ್ತು ಶುಚಿತ್ವವನ್ನು ಕಡ್ಡಾಯವಾಗಿ ಕಾಪಾಡಬೇಕು. ಮಕ್ಕಳಲ್ಲಿ ಓದುವ ಹವ್ಯಾಸ ಬೆಳೆಸಲು ಗ್ರಂಥಾಲಯ ಬಳಕೆ, ಗುಂಪು ಅಧ್ಯಯನ, ಪ್ರೇರಣಾತ್ಮಕ ಬೋಧನೆ ಹಾಗೂ ಇತರ ಶೈಕ್ಷಣಿಕ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು ಎಂದು ಸಲಹೆ ನೀಡಿದರು.

“ಪ್ರತಿಯೊಬ್ಬ ಮಗುವಿನ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವುದು ಶಿಕ್ಷಕರ ಜವಾಬ್ದಾರಿ. ಶಿಕ್ಷಕರು ಕೇವಲ ಪಾಠ ಹೇಳುವವರಾಗಿರದೆ, ಮಕ್ಕಳ ಸ್ನೇಹಿತರಾಗಿ, ಮಾರ್ಗದರ್ಶಕರಾಗಿ ಮತ್ತು ಪ್ರೇರಕರಾಗಿ ಕಾರ್ಯನಿರ್ವಹಿಸಬೇಕು. ಮಕ್ಕಳ ಸಣ್ಣ ಸಮಸ್ಯೆಗಳಿಗೂ ಸ್ಪಂದಿಸಿ ಅವರಲ್ಲಿ ಆತ್ಮವಿಶ್ವಾಸ ಬೆಳೆಸಬೇಕು” ಎಂದು ಜಿಲ್ಲಾಧಿಕಾರಿಗಳು ಹೇಳಿದರು.ಬಳಿಕ ವಿದ್ಯಾರ್ಥಿಗಳ ವಸತಿ ಕೊಠಡಿಗಳು, ಸ್ನಾನಗೃಹ, ಶೌಚಾಲಯ ಹಾಗೂ ಇತರ ಮೂಲಸೌಕರ್ಯಗಳನ್ನು ಪರಿಶೀಲಿಸಿ, ಯಾವುದೇ ಕೊರತೆ ಕಂಡುಬಂದರೆ ತಕ್ಷಣ ಸರಿಪಡಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, “ಸರ್ಕಾರ ನಿಮಗಾಗಿ ಕಲ್ಪಿಸಿರುವ ಪ್ರತಿಯೊಂದು ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಿ. ಶ್ರದ್ಧೆಯಿಂದ ಅಭ್ಯಾಸ ಮಾಡಿ ಉತ್ತಮ ಫಲಿತಾಂಶ ಗಳಿಸಿ. ನಿಮ್ಮ ಸಾಧನೆಯ ಮೂಲಕ ಪೋಷಕರು, ಶಿಕ್ಷಕರು ಹಾಗೂ ಶಾಲೆಗೆ ಹೆಮ್ಮೆ ತಂದುಕೊಡಿ. ನಿಮ್ಮ ಕನಸುಗಳನ್ನು ನನಸಾಗಿಸುವ ಶಕ್ತಿ ನಿಮ್ಮಲ್ಲಿದೆ” ಎಂದು ಪ್ರೇರಣಾದಾಯಕ ಕಿವಿಮಾತು ಹೇಳಿದರು.ಅಡುಗೆ ಸಿಬ್ಬಂದಿಯೊಂದಿಗೂ ಪ್ರತ್ಯೇಕವಾಗಿ ಮಾತನಾಡಿದ ಜಿಲ್ಲಾಧಿಕಾರಿಗಳು, ಆಹಾರ ತಯಾರಿಕೆ ವೇಳೆ ವೈಯಕ್ತಿಕ ಸ್ವಚ್ಛತೆ, ಅಡುಗೆಮನೆಯ ಶುಚಿತ್ವ ಹಾಗೂ ಪೌಷ್ಟಿಕಾಂಶಕ್ಕೆ ಹೆಚ್ಚಿನ ಆದ್ಯತೆ ನೀಡಿ ಮಕ್ಕಳ ಆರೋಗ್ಯವನ್ನು ಕಾಪಾಡುವ ಜವಾಬ್ದಾರಿಯಿಂದ ಕೆಲಸ ನಿರ್ವಹಿಸಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಪ್ರಾಚಾರ್ಯರು, ನಿಲಯ ಪಾಲಕರು, ಶಿಕ್ಷಕರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.


## ಎಸ್ ಐ ಆರ್ ವಿಶೇಷ ಪರಿಷ್ಕರಣೆ ಅಭಿಯಾನ ಯಶಸ್ವಿ

**ಸೇಡಂ, ಜು ,25:** ಎಸ್ ಐ ಆರ್ ವಿಶೇಷ ಪರಿಷ್ಕರಣೆ ಅಭಿಯಾನವನ್ನು ಯಶಸ್ವಿಯಾಗಿ ಪೂರ್ಣಗೊಳಿಸಲು ಶ್ರಮಿಸಿದ ಎಲ್ಲಾ ಬಿ ಎಲ್ ಓ ಅಧಿಕಾರಿಗಳಿಗೆ,ಸಿಬ್ಬಂದಿ ಹಾಗೂ ಈ ಅಭಿಯಾನಕ್ಕೆ ಮಾರ್ಗದರ್ಶನ,ಸಹಕಾರ ಮತ್ತು ಬೆಂಬಲ ನೀಡಿ ನಿಮ್ಮ ಅಮೂಲ್ಯ ಸಹಕಾರದಿಂದ ಈ ಅಭಿಯಾನ ಯಶಸ್ವಿಯಾಗಿ ಪೂರ್ಣಗೊಳುತ್ತಿದೆ ಎಂದು ಕಲಬುರಗಿ ಜಿಲ್ಲಾ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಯಾದ ಅಬ್ದುಲ್ ಸತ್ತಾರ್ ನಾಡೇಪಲ್ಲಿ ಪ್ರತಿಯೊಬ್ಬರಿಗೂ ಹೃತ್ಪೂರ್ವಕ ಧನ್ಯವಾದಗಳನ್ನು ಸಲ್ಲಿಸುತ್ತೇವೆ ಎಂದು ಹೇಳಿದರು. ನಗರದಲ್ಲಿರುವ ವಾರ್ಡ್ ನಂ. 04ರಲ್ಲಿರುವ ಭರ್ತಿ ಮಾಡಿದ SIR ನಮೂನೆಗಳು (Forms) ಇನ್ನೂ ನಿಮ್ಮ ಬಳಿ ಇದ್ದರೆ, ದಯವಿಟ್ಟು ಸಂಬಂಧಿತ BLO ಅವರಿಗೆ ತಕ್ಷಣವೇ ಸಲ್ಲಿಸಿ.ನಿಮ್ಮ ಕುಟುಂಬದಲ್ಲಿ ಯಾರಾದರೂ ಸ್ಥಳಾಂತರಗೊಂಡಿದ್ದರೆ (Shifted) ಅಥವಾ ಮೃತಪಟ್ಟಿದ್ದರೆ (Death), ದಯವಿಟ್ಟು ಸಂಬಂಧಿತ BLO ಅವರಿಗೆ ಮಾಹಿತಿ ನೀಡಿ. ಇನ್ನೂ SIR ನಮೂನೆಗಳನ್ನು ಭರ್ತಿ ಮಾಡದಿರುವವರು ಶೀಘ್ರದಲ್ಲೇ ತಮ್ಮ ಃಐಔ ಅವರನ್ನು ಸಂಪರ್ಕಿಸಿ ನಮೂನೆಗಳನ್ನು ಭರ್ತಿ ಮಾಡಿಕೊಳ್ಳಿ.SIR ವಿಶೇಷ ಪರಿಷ್ಕರಣೆ ಅಭಿಯಾನದ ಕೊನೆಯ ದಿನಾಂಕ: 08 ಆಗಸ್ಟ್ 2026. ವಿಳಂಬ ಮಾಡದೆ ನಿಮ್ಮ ನಮೂನೆಗಳನ್ನು ಭರ್ತಿ ಮಾಡಿ ಸಂಬಂಧಿತ ಃಐಔ ಅವರಿಗೆ ಸಲ್ಲಿಸಿ ಎಂದು ವಿನಂತಿಸಿದ್ದರು.ಈ ವೇಳೆಯಲ್ಲಿ ಗ್ವಾಲೇಶ್ (CEA), ಶಂಭುಲಿಂಗ (RO), ರಾಮು ಗೋಣಿ, ಸರಸ್ವತಿ (BLO), ಶರಣಮ್ಮ (BLO), ಜಗದೇವಿ (BLO), ಕಲಬುರಗಿ ಜಿಲ್ಲಾ ಅಲ್ಪಸಂಖ್ಯಾತ ಉಪಾಧ್ಯಕ್ಷರಾದ ಮೊಹಮ್ಮದ್ ಹಾಜಿ ನಾಡೇಪಲ್ಲಿ, ಮಾಜಿ ಪುರಸಭೆ ಸದಸ್ಯರಾದ ಸಂತೋಷ್ ತಳವಾರ್, ಕಲಬುರಗಿ



ಜಿಲ್ಲಾ ಯುವ ಕಾಂಗ್ರೆಸ್‌ನ ಪ್ರಧಾನ ಕಾರ್ಯದರ್ಶಿಯಾದ ಅಬ್ದುಲ್ ಸತ್ತಾರ್ ನಾಡೇಪಲ್ಲಿ, ಸೇಡಂ ತಾಲೂಕಿನ ಅಸೆಂಬ್ಲಿ ಅಧ್ಯಕ್ಷರಾದ ಭೀಮಾಶಂಕರ್ ಕೊಳ್ಳಿ, ಶೇಕ್ ಆದಂ, ದಿಲ್ಶಾದ್ ನಿರ್ಣಾವಿ, ಮಲ್ಲಣ್ಣ ಪೆಂಚನಪಲ್ಲಿ, ಯುವ ನಾಯಕನಾದ ಆಕಾಶ್ ಭಾಗೋಡಿ, ಶೇಕ್ ಅಲ್ತಾಫ್, ಸಮೀರ್ ಖಾನ್ ಹಾಗೂ ಮಲ್ಲಿಕಾರ್ಜುನ ಭೀಮನಳ್ಳಿ ಮಾಜಿ ಪುರಸಭೆ ಸದಸ್ಯರಾದ ರಾಜು ಹಡಪದ,ಮಾಜಿ ಪುರಸಭೆ ಸದಸ್ಯರಾದ ಅಶೋಕ ಮಾಣಿಕ್ ಖಾದರ್ ಶಾ ಸೇರಿದಂತೆ ಹಲವರು ಉಪಸ್ಥಿತರಿದ್ದರು

## ಜಿಲ್ಲೆಯಲ್ಲಿ ರಸಗೊಬ್ಬರಗಳ ಕಾಳಸಂತೆ: ದುಬಾರಿ ಬೆಲೆಗೆ ಮಾರಾಟ ಆರೋಪ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ರೈತ ಸಂಘ ಮತ್ತು ಕಾರ್ಮಿಕ ಸೇನೆ ಒತ್ತಾಯ



**ಯಾದಗಿರಿ:** ಜಿಲ್ಲೆಯ ವಿವಿಧ ಆಗ್ರೋ ಏಜೆನ್ಸಿಗಳಲ್ಲಿ ಯೂರಿಯಾ ಹಾಗೂ ಡಿ.ಎ.ಪಿ. ಸೇರಿದಂತೆ ರಸಗೊಬ್ಬರಗಳನ್ನು ಸರ್ಕಾರ ನಿಗದಿಪಡಿಸಿದ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡಲಾಗುತ್ತಿದ್ದು, ಈ ಅಕ್ರಮವನ್ನು ತಕ್ಷಣ ತಡೆದು ಸಂಬಂಧಪಟ್ಟ ಅಧಿಕಾರಿಗಳು ಹಾಗೂ ವ್ಯಾಪಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಕಾರ್ಮಿಕ ಸೇನೆ ಆಗ್ರಹಿಸಿದೆ.

ಈ ಕುರಿತು ಶುಕ್ರವಾರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಮಾತನಾಡಿದ ಸಂಘದ ಜಿಲ್ಲಾಧ್ಯಕ್ಷ ಪೋಲಪ್ಪ ಎಂ. ನಾರಾಯಣನೋರ್, ಜಿಲ್ಲೆಯಲ್ಲಿ ಸಮರ್ಪಕ ಮಳೆಯಾಗದ ಕಾರಣ ರೈತರು ಈಗಾಗಲೇ ಸಂಕಷ್ಟದಲ್ಲಿದ್ದಾರೆ. ಇಂತಹ ಸಂದರ್ಭದಲ್ಲಿ ಅಗತ್ಯ ರಸಗೊಬ್ಬರಗಳನ್ನು ದುಬಾರಿ ಬೆಲೆಗೆ ಮಾರಾಟ ಮಾಡುತ್ತಿರುವುದು ರೈತರ ಗಾಯದ ಮೇಲೆ ಬರೆ ಎಳೆದಂತಾಗಿದೆ ಎಂದು ಆರೋಪಿಸಿದರು.

ಡಿ.ಎ.ಪಿ. ರಸಗೊಬ್ಬರದ ನಿಗದಿತ ಬೆಲೆ 1,350 ಇದ್ದರೂ ಕೆಲವು ಕಡೆಗಳಲ್ಲಿ 1,800 ರಿಂದ 2,000ರವರೆಗೆ ವಸೂಲಿ ಮಾಡಲಾಗುತ್ತಿದೆ. ಅದೇ ರೀತಿ 266 ಬೆಲೆಯ ಯೂರಿಯಾವನ್ನು 500ರಿಂದ 700ರವರೆಗೆ ಮಾರಾಟ ಮಾಡಲಾಗುತ್ತಿದೆ ಎಂದು ಅವರು ದೂರಿದರು.

ಎಫ್‌ಐಡಿ (Fertilizer Invoice Details) ಸೇರಿದಂತೆ ಅಗತ್ಯ ದಾಖಲೆಗಳಿಲ್ಲದೇ ಅಕ್ರಮವಾಗಿ ರಸಗೊಬ್ಬರಗಳನ್ನು ಕಾಳಸಂತೆಯಲ್ಲಿ ಮಾರಾಟ ಮಾಡಲಾಗುತ್ತಿದ್ದು, ರೈತರಿಂದ ಅಕ್ರಮವಾಗಿ ಹೆಚ್ಚಿನ ಹಣ ವಸೂಲಿ ಮಾಡಲಾಗುತ್ತಿದೆ. ಇದು ರೈತರ ಮೇಲಿನ ಬಹಿರಂಗ ಶೋಷಣೆಯಾಗಿದ್ದು, ಸಂಬಂಧಿಸಿದ ಇಲಾಖೆ ಕೂಡಲೇ ಮಧ್ಯಪ್ರವೇಶಿಸಿ ಅಕ್ರಮಕ್ಕೆ ಕಡಿವಾಣ ಹಾಕಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರ ಕಚೇರಿಗೆ ಈ ಬೆಳವಣಿಗೆಗಳ ಬಗ್ಗೆ ಮಾಹಿತಿ ಇದ್ದರೂ ಯಾವುದೇ ಕ್ರಮ ಕೈಗೊಳ್ಳದಿರುವುದು ಅನುಮಾನಗಳಿಗೆ ಕಾರಣವಾಗಿದೆ. ಈ ಅಕ್ರಮದಲ್ಲಿ ನಿರ್ಲಕ್ಷ್ಯ ಅಥವಾ ಭಾಗಿಯಾಗಿರುವ ಅಧಿಕಾರಿಗಳ ವಿರುದ್ಧ ಇಲಾಖಾ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಅಮಾನತು ಸೇರಿದಂತೆ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು. ಮನವಿ ಸಲ್ಲಿಸುವ ಸಂದರ್ಭದಲ್ಲಿ ಸಂಘದ ಗೌರವಾಧ್ಯಕ್ಷ ದೇವಿಂದ್ರಪ್ಪ ವಾರಿ, ತಾಲೂಕು ಅಧ್ಯಕ್ಷ ಭೀಮರಾಯ ಬಾವುರ್, ವಡಗೇರಾ ತಾಲೂಕು ಅಧ್ಯಕ್ಷ ಕಾಡಪ್ಪ ಹೂಗಾರ್ (ಕುಮನೂರು), ಉಪಾಧ್ಯಕ್ಷ ಚಂದ್ರುಗೌಡ ಸೇರಿದಂತೆ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ದೇ.ಗಾಣಗಾಪೂರ; ಟಂ-ಟಂ ಚಾಲಕನ ಭೀಕರ ಹತ್ಯೆ



**ಕಲಬುರಗಿ,ಜು.25**-ಕೇವಲ “ದಿಟ್ಟಿಸಿ ನೋಡಿದ’ ಸಣ್ಣ ವಿಚಾರವೇ ನೆಪವಾಗಿ ಇಟ್ಟುಕೊಂಡು ಟಂ-ಟಂ ಚಾಲಕನಾಗಿದ್ದ 19 ವರ್ಷದ ಯುವಕನೋರ್ವನನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಭೀಕರವಾಗಿ ಹತ್ಯೆ ಮಾಡಿರುವ ಘಟನೆ ಅಫಜಲಪುರ ತಾಲ್ಲೂಕಿನ ಪ್ರಸಿದ್ಧ ಯಾತ್ರಾ ಸ್ಥಳವಾದ ದೇವಲಗಾಣಗಾಪುರದಲ್ಲಿ ನಡೆದಿದೆ. ಈ ಘಟನೆ ಗ್ರಾಮದ ಜನತೆಯನ್ನು ಬೆಚ್ಚಿ ಬೀಳಿಸಿದೆ.

ಶುಕ್ರವಾರ ನಸುಕಿನ ಜಾವ 2:17 ರ ಸುಮಾರಿಗೆ ದೇವಲ ಗಾಣಗಾಪುರದ ಸಂಗಮ ರಸ್ತೆಯಲ್ಲಿರುವ ಅವಧೂತ ಆಶ್ರಮದ ಸಮೀಪ ಈ ಕ್ರೌರ್ಯ ನಡೆದಿದೆ. ಗ್ರಾಮದ ದತ್ತು (19) ಎಂಬ ಟಂ-ಟಂ ಚಾಲಕ ಹತ್ಯೆಯಾದ

ದುರ್ದೈವಿಯಾಗಿದ್ದಾನೆ. ದತ್ತು ಮೇಲೆ ಅದೇ ಗ್ರಾಮದ ಪ್ರಜ್ವಲ್ ಮಲ್ಕಪ್ಪ ಹೊಸಮನಿ ಹಾಗೂ ಪ್ರೀತಮ್ ಹೊಸಮನಿ ಎಂಬಿಬ್ಬರು ದಾಳಿ ನಡೆಸಿ ಮಾರಕಾಸ್ತ್ರಗಳಿಂದ ತೀವ್ರವಾಗಿ ಹಲ್ಲೆ ನಡೆಸಿದ್ದಾರೆ. ಘಟನೆಯಲ್ಲಿ ಗಂಭೀರವಾಗಿ ಗಾಯಗೊಂಡು ರಕ್ತದ ಮಡುವಿನಲ್ಲಿ ಬಿದ್ದಿದ್ದ ದತ್ತು ಅವರನ್ನು ತಕ್ಷಣವೇ ಕಲಬುರಗಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಅವರು ಕೊನೆಯುಸಿರೆಳೆದಿದ್ದಾರೆ.

ಆರೋಪಿಗಳು ತಂಗಿದ್ದ ಜಾಗದಲ್ಲಿ ದಿಟ್ಟಿಸಿ ನೋಡಿದೆ’ ಎಂಬ ಕ್ಷುಲ್ಲಕ ನೆಪವನ್ನಿಟ್ಟುಕೊಂಡು ತನ್ನ ಮೇಲೆ ಹಲ್ಲೆ ನಡೆಸಿದರು ಎಂದು ಗಾಯಾಳು ಯುವಕ ಆಸ್ಪತ್ರೆಯಲ್ಲಿದ್ದಾಗ ನೀಡಿರುವ ಹೇಳಿಕೆಯಿಂದ ತಿಳಿದುಬಂದಿದೆ.

ಘಟನೆಗೆ ಸಂಬಂಧಿಸಿದಂತೆ ದೇವಲಗಾಣಗಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಸ್ಥಳೀಯ ಪೊಲೀಸರು ತನಿಖೆ ಚುರುಕುಗೊಳಿಸಿದ್ದಾರೆ. ಪವಿತ್ರ ಕ್ಷೇತ್ರದಲ್ಲೇ ನಡುರಾತ್ರಿ ನಡೆದ ಈ ಭೀಕರ ಘಟನೆಯಿಂದಾಗಿ ಗ್ರಾಮದಲ್ಲಿ ತೀವ್ರ ಆತಂಕ ಮನೆ ಮಾಡಿದ್ದು, ಬೂದಿ ಮುಚ್ಚಿದ ಕೆಂಡದಂತಹ ವಾತಾವರಣ ನಿರ್ಮಾಣವಾಗಿದೆ.

## ಏಕಲಮಟ್ಟಿ ಏತ ನೀರಾವರಿ ಯೋಜನೆ ವಿಳಂಬ ಖಂಡಿಸಿ ರೈತರ ಬೃಹತ್ ಪ್ರತಿಭಟನೆ



**ಜಮಖಂಡಿ, ಜು. 25:** ಚಿಕ್ಕಲಕಿ-ತೊದಲಬಾಗಿ-ಏಕಲಮಟ್ಟಿ ಏತ ನೀರಾವರಿ ಯೋಜನೆಯ ಕಾಮಗಾರಿ ವಿಳಂಬವನ್ನು ಖಂಡಿಸಿ ರೈತರು ತೊದಲಬಾಗಿಯಿಂದ ಅರಬೆತ್ತಲೆ ಮೆರವಣಿಗೆ ನಡೆಸಿ ಚಿಕ್ಕಲಕಿ ಕ್ರಾಸ್‌ನಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

ಸುಮಾರು 13 ವರ್ಷಗಳ ಹಿಂದೆ ಆರಂಭವಾದ ಏಕಲಮಟ್ಟಿ ಏತ ನೀರಾವರಿ ಯೋಜನೆ ಇನ್ನೂ ಪೂರ್ಣಗೊಂಡಿಲ್ಲ. ಇದರಿಂದ ಈ ಭಾಗದ ರೈತರಿಗೆ ಇದುವರೆಗೆ ನೀರಾವರಿ ಸೌಲಭ್ಯ ದೊರೆತಿಲ್ಲ ಎಂದು ಪ್ರತಿಭಟನಾಕಾರರು ಸರ್ಕಾರ ಹಾಗೂ ಜನಪ್ರತಿನಿಧಿಗಳ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯ ವೇಳೆ ರೈತರು ಎತ್ತುಗಾಡಿಗಳೊಂದಿಗೆ ವಿಜಯಪುರ-ಧಾರವಾಡ ರಾಷ್ಟ್ರೀಯ ಹೆದ್ದಾರಿಯನ್ನು ಚಿಕ್ಕಲಕಿ ಕ್ರಾಸ್‌ನಲ್ಲಿ ತಡೆದು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಬಾಕಿ ಉಳಿದಿರುವ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಿ ಕಾಲುವೆಗಳಿಗೆ ತಕ್ಷಣ ನೀರು ಹರಿಸಬೇಕು ಎಂದು ಒತ್ತಾಯಿಸಿದರು.

ಬರಪೀಡಿತ ಪ್ರದೇಶಗಳ ಕೃಷಿಭೂಮಿಗೆ ನೀರಾವರಿ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ಆರಂಭಗೊಂಡ ಯೋಜನೆ ಆಡಳಿತಾತ್ಮಕ ನಿರ್ಲಕ್ಷ್ಯ ಮತ್ತು ಜನಪ್ರತಿನಿಧಿಗಳ ಉದಾಸೀನತೆಯಿಂದ ವಿಳಂಬವಾಗಿದೆ. ಪರಿಣಾಮ ರೈತರು ನೀರಿಲ್ಲದೆ ಬೆಳೆ ನಷ್ಟ ಅನುಭವಿಸುತ್ತಿದ್ದು, ಸರ್ಕಾರ ಕೂಡಲೇ ಯೋಜನೆ ಪೂರ್ಣಗೊಳಿಸಿ ರೈತರ ಜಮೀನುಗಳಿಗೆ ನೀರು ಒದಗಿಸಬೇಕು ಎಂದು ಆಗ್ರಹಿಸಿದರು.

ಹೋರಾಟಕ್ಕೆ ಜಕನೂರ ಮಠದ ಶ್ರೀ ಮಾಧುಲಿಂಗ ಮಹಾರಾಜರು ಭೇಟಿ ನೀಡಿ ರೈತರಿಗೆ ಬೆಂಬಲ ಸೂಚಿಸಿ, ಸರ್ಕಾರ ರೈತರ ನ್ಯಾಯಸಮ್ಮತ ಬೇಡಿಕೆಯನ್ನು ತಕ್ಷಣ ಈಡೇರಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಬಾಗಲಕೋಟೆ ಜಿಲ್ಲಾ ರೈತ ಸಂಘದ ಅಧ್ಯಕ್ಷ ಮಹಾದೇವ ನಾಯಕ್, ಜಿಲ್ಲಾ ಉಪಾಧ್ಯಕ್ಷ ರಾಮಪ್ಪ ಕರಜಗಿ, ಗ್ರಾಮ ರೈತ ಸಂಘದ ಅಧ್ಯಕ್ಷ ಸಹದೇವ ಕದಮ, ಸಿದ್ದರಾಯಿ ಸಣಸಿದ್ದ, ಅಪ್ಪಾಜಿ ಸೂರ್ಯವಂಶಿ, ಮಹೇಶ್ ಮಾಡಿಕ, ಪಾಂಡು ಜಾಂಬ್ರೆ, ಸಿದ್ದು ಭೋಸಲೆ, ಮಾಜಿ ಸೈನಿಕ ಶ್ರೀಧರ ಕಾಸರ, ದರಪ್ಪ ನಾವಿ, ಸಾಬು ಗುಡ್ಡದ, ರೇವಣಸಿದ್ದ ಮಾದರ್, ಶ್ರೀಕಾಂತ ಬಡಿಗೇರ್, ಮಲ್ಲಪ್ಪ ಸಣಸಿದ್ದ, ಸಿದ್ದಪ್ಪ ಹೆಗ್ಗೊಂಡ, ಶ್ರೀಶೈಲ್ ಕರಿಕಲ್, ಶ್ರೀಶೈಲ್ ಕಕಮರಿ, ರಮೇಶ್ ಸಾಯಗೊಂಡ, ಈಶ್ವರ ಸಾಯಗೊಂಡ, ಸಿದ್ದು ಸಾಯಗೊಂಡ, ಸಾಗರ ಭಜಂತ್ರಿ, ಶ್ರೀಪಾದ ಕಾಸರ, ಗೌಡೇಶ್ ಬರಗಿ, ಮಾಜಿ ಸೈನಿಕ ಶಿಖರೆಪ್ಪ ಸಣಸಿದ್ದ ಸೇರಿದಂತೆ ನೂರಾರು ರೈತರು, ಯುವಕರು ಹಾಗೂ ಹಿರಿಯರು ಭಾಗವಹಿಸಿದ್ದರು.

# ಸೇವಾ ಕಾರ್ಯಗಳ ಮೂಲಕ ಹಿರಿಯರನ್ನು ಸ್ಮರಿಸುವುದೇ ನಿಜವಾದ ಗೌರವ: ಹೆಡಗಿಮದ್ರಾ ಶ್ರೀ

**ಯಾದಗಿರಿ:** ಹಿರಿಯರ ಭಾವಚಿತ್ರಕ್ಕೆ ಪುಷ್ಪಮಾಲೆ ಅರ್ಪಿಸಿ ಔಪಚಾರಿಕವಾಗಿ ಗೌರವ ಸಲ್ಲಿಸುವುದಕ್ಕಿಂತ, ಸಮಾಜಕ್ಕೆ ಉಪಯೋಗವಾಗುವ ಸೇವಾ ಕಾರ್ಯಗಳನ್ನು ಕೈಗೊಂಡು ಅವರ ಆದರ್ಶಗಳನ್ನು ಜೀವಂತವಾಗಿಡುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವ ಎಂದು ಹೆಡಗಿಮದ್ರಾ ಶಾಂತಶಿವಯೋಗಿ ಮಠದ ಪೀಠಾಧಿಪತಿಗಳಾದ ಶ್ರೀ ಶಾಂತಮಲ್ಲಿಕಾರ್ಜುನ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ನಗರದ ಶ್ರೀ ರಾಚನಗೌಡ ಮುದ್ನಾಳ ಅವರ ನಿವಾಸದ ಮುಂಭಾಗದಲ್ಲಿ ಶುಕ್ರವಾರ ಲಿಂಗೈಕ್ಯ ಹಿರಿಯರ ಪುಣ್ಯಸ್ಮರಣಾರ್ಥ ಆಯೋಜಿಸಿದ್ದ ಉಚಿತ ನೇತ್ರ ತಪಾಸಣೆ, ಚಿಕಿತ್ಸೆ ಹಾಗೂ ಕನ್ನಡಕ ವಿತರಣಾ ಶಿಬಿರದ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಹಿರಿಯರು ಸಮಾಜಕ್ಕೆ ನೀಡಿದ ಮೌಲ್ಯಗಳು ಮತ್ತು ಆದರ್ಶಗಳನ್ನು ಸೇವಾ ಚಟುವಟಿಕೆಗಳ ಮೂಲಕ ಮುಂದುವರಿಸುವುದು ಅತ್ಯಂತ ಅರ್ಥಪೂರ್ಣ ಕಾರ್ಯ ಎಂದು ಅಭಿಪ್ರಾಯಪಟ್ಟರು.

ಲಿಂಗೈಕ್ಯ ಶ್ರೀ ಸೋಮನಾಥರೆಡ್ಡಿಗೌಡ ಶಿವರಾಯ ಯಲ್ಹೇರಿ, ಶ್ರೀಮತಿ ಶಂಕರಲಿಂಗಮ್ಮ ಸೋಮನಾಥರೆಡ್ಡಿಗೌಡ ಯಲ್ಹೇರಿ, ಡಾ. ವೀರಬಸವಂರೆಡ್ಡಿಗೌಡ ಮುದ್ನಾಳ ಹಾಗೂ ಶ್ರೀ ವೆಂಕಟರೆಡ್ಡಿಗೌಡ ಮುದ್ನಾಳ ಅವರ ಪವಿತ್ರ ಸ್ಮರಣಾರ್ಥ ಈ ಸಮಾಜಮುಖಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

"ಜನಸೇವೆಯೇ ಜನಾರ್ಧನ ಸೇವೆ. ಹಿರಿಯರು ತೋರಿಸಿದ ಆದರ್ಶದ ಹಾದಿಯಲ್ಲಿ ನಡೆಯುತ್ತಾ ಸಮಾಜಮುಖಿ ಕಾರ್ಯಗಳನ್ನು ಕೈಗೊಳ್ಳುವುದೇ ಅವರಿಗೆ ಸಲ್ಲಿಸುವ ಅತ್ಯುನ್ನತ ಗೌರವವಾಗಿದೆ" ಎಂದು ಶ್ರೀಗಳು ತಮ್ಮ ಆಶೀರ್ವಚನದಲ್ಲಿ ತಿಳಿಸಿದರು.

ಕಾರ್ಯಕ್ರಮದಲ್ಲಿ ನೂರಾರು ಫಲಾನುಭವಿಗಳಿಗೆ ಉಚಿತ ನೇತ್ರ ತಪಾಸಣೆ ನಡೆಸಲಾಯಿತು. ತಜ್ಞ ವೈದ್ಯರು ಕಣ್ಣಿನ ಪರೀಕ್ಷೆ ನಡೆಸಿ ಶಸ್ತ್ರಚಿಕಿತ್ಸೆ ಅಗತ್ಯವಿರುವವರನ್ನು ಗುರುತಿಸಿ ನೋಂದಣಿ ಮಾಡಿದರು. ದೃಷ್ಟಿದೋಷ ಹೊಂದಿದ್ದ ಅರ್ಹರಿಗೆ ಉಚಿತ



ಕನ್ನಡಕಗಳನ್ನು ವಿತರಿಸಿ ಆರೋಗ್ಯ ಸೇವೆಯನ್ನು ಒದಗಿಸಲಾಯಿತು.

ನಗರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ್ದ ಸಾರ್ವಜನಿಕರು ಈ ಸೇವಾ ಶಿಬಿರದ ಪ್ರಯೋಜನ ಪಡೆದುಕೊಂಡು ಆಯೋಜಕರ ಕಾರ್ಯವನ್ನು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಹಿರಿಯ ಮುಖಂಡ ರಾಚನಗೌಡ ಮುದ್ನಾಳ, ಖ್ಯಾತ ನೇತ್ರ ತಜ್ಞ ಡಾ. ಪ್ರದೀಪ್ ರೆಡ್ಡಿ, ಡಾ. ಶರಣಗೌಡ ಯಲ್ಹೇರಿ, ಡಾ. ವಿವೇಕಾನಂದರೆಡ್ಡಿ ಯಲ್ಹೇರಿ, ಭೀಮಣ್ಣಗೌಡ ಕ್ಯಾತ್ನಾಳ, ಶಂಕರ ಸೋನರ್ ಸೇರಿದಂತೆ ಅನೇಕ ಗಣ್ಯರು, ಮುಖಂಡರು, ಕಾರ್ಯಕರ್ತರು ಹಾಗೂ ಕುಟುಂಬದ ಸದಸ್ಯರು ಉಪಸ್ಥಿತರಿದ್ದರು.

# ಪರಿಷ್ಕೃತ ವೇತನ ಜಾರಿ, ಬಾಕಿ ವೇತನ ಪಾವತಿ ಹಾಗೂ 7 ಕಾರ್ಮಿಕರ ಮರುನೇಮಕಕ್ಕೆ ಆಗ್ರಹಿಸಿ ಪ್ರತಿಭಟನೆ




**ವಿಜಯಪುರ, ಜು.25:** ಕರ್ನಾಟಕ ರಾಜ್ಯ ಸಂಯುಕ್ತ ವಸತಿ ನಿಲಯ ಕಾರ್ಮಿಕರ ಜಿಲ್ಲಾ ಸಮಿತಿಯ ನೇತೃತ್ವದಲ್ಲಿ ಜಿಲ್ಲಾ ಪಂಚಾಯತ್ ಕಚೇರಿ ಎದುರು ಗುರುವಾರ ಪ್ರತಿಭಟನೆ ನಡೆಸಿ, ವಸತಿ ನಿಲಯ ಹೊರಗುತ್ತಿಗೆ ಕಾರ್ಮಿಕರ ವಿವಿಧ ನ್ಯಾಯಸಮ್ಮತ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಪ್ರತಿಭಟನಾಕಾರರು ಪರಿಷ್ಕೃತ ವೇತನವನ್ನು ತಕ್ಷಣದಿಂದಲೇ ಜಾರಿಗೆ ತಂದು ಪಾವತಿಸಬೇಕು, ಪ್ರತಿ ತಿಂಗಳ ವೇತನವನ್ನು ನಿಗದಿತ ದಿನಾಂಕದೊಳಗೆ ಯಾವುದೇ ವಿಳಂಬವಿಲ್ಲದೆ ನೀಡಬೇಕು ಎಂದು ಆಗ್ರಹಿಸಿದರು.

ಅಲ್ಲದೆ, ಬಸವನ ಬಾಗೇವಾಡಿ ಪಟ್ಟಣದಲ್ಲಿ ಯಾವುದೇ ತಪ್ಪು ಮಾಡದಿದ್ದರೂ ಸೇವೆಯಿಂದ ವಜಾಗೊಳಿಸಿರುವ ಏಳು ಮಂದಿ ಹೊರಗುತ್ತಿಗೆ ಕಾರ್ಮಿಕರನ್ನು ಕೂಡಲೇ ಮರುನೇಮಕ ಮಾಡಬೇಕು ಎಂದು ಒತ್ತಾಯಿಸಿದರು.

ಮನವಿ ಸ್ವೀಕರಿಸಿದ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳು, ಕಾರ್ಮಿಕರ ಬೇಡಿಕೆಗಳ ಕುರಿತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಸಿಇಒ) ಅವರೊಂದಿಗೆ ಸಭೆ ನಡೆಸಿ, ಸಮಸ್ಯೆಗಳ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಳ್ಳಲು ಪ್ರಯತ್ನಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ರಾಜ್ಯ ಖಜಾಂಚಿ ಹಾಗೂ ಎಐಯುಟಿಯುಸಿ ಕಾರ್ಮಿಕ ಸಂಘಟನೆ ಜಿಲ್ಲಾ ಅಧ್ಯಕ್ಷ ಮಲ್ಲಿಕಾರ್ಜುನ ಹೆಚ್.ಟಿ., ವಸತಿ ನಿಲಯಗಳಲ್ಲಿ ಸೇವೆ ಸಲ್ಲಿಸುತ್ತಿರುವ ಹೊರಗುತ್ತಿಗೆ ಕಾರ್ಮಿಕರು ಹಲವು ವರ್ಷಗಳಿಂದ ಕಡಿಮೆ ವೇತನ, ವೇತನ ಪಾವತಿಯಲ್ಲಿ ವಿಳಂಬ ಹಾಗೂ ಉದ್ಯೋಗ ಭದ್ರತೆಯ ಕೊರತೆಯನ್ನು ಎದುರಿಸುತ್ತಿದ್ದಾರೆ. ಸರ್ಕಾರ ಕಾರ್ಮಿಕರ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ ತಕ್ಷಣವೇ ಪರಿಹಾರ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ಅಧ್ಯಕ್ಷೆ ಕಾಶಿಭಾಯಿ ಜನಗೂಂಡ ಮಾತನಾಡಿ, ನ್ಯಾಯಸಮ್ಮತ ಬೇಡಿಕೆಗಳನ್ನು ಸರ್ಕಾರ ನಿರ್ಲಕ್ಷಿಸಿದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಕಾರ್ಯದರ್ಶಿ ರಜನಿ, ಮಲ್ಲಮ್ಮ, ಪಾರ್ವತಿ ಸುವರ್ಣ, ಗಂಗಾ ಹಲಗಿ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ಹೊರಗುತ್ತಿಗೆ ಕಾರ್ಮಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಸಂಪರ್ಕಮಾಹಿತಿ

# ನೀಟ್ ಪರೀಕ್ಷೆಯಲ್ಲಿ ಸನಾ ಪಿಯು ಕಾಲೇಜಿನ ಅತ್ಯುತ್ತಮ ಸಾಧನೆ ಅಂಜುಮನ್ ಕಮಿಟಿಯಿಂದ ಸತ್ಕಾರ



**ಅಥಣಿ : ಜು.25:** ತಾಲೂಕಿನ ಸನಾ ಪಿಯು ಕಾಲೇಜಿನ 2026-27ನೇ ಶೈಕ್ಷಣಿಕ ವರ್ಷದ ಒಟ್ಟು 8 ವಿದ್ಯಾರ್ಥಿಗಳು ನೀಟ್ ಪರೀಕ್ಷೆಯಲ್ಲಿ ಉತ್ಕೃಷ್ಟ ಅಂಕಗಳನ್ನು ಪಡೆದು ಎಂಬಿಬಿಎಸ್ ವೈದ್ಯಕೀಯ ಕೋರ್ಸ್ಗೆ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ, ಅಥಣಿ ಅಂಜುಮನ್-ಎ-ಇಸ್ಲಾಂ ಸಮಿತಿ ಹಾಗೂ ಮುಸ್ಲಿಂ ಸಮಾಜದ ಮುಖಂಡರು ಸಾಧಕ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಸತ್ಕರಿಸಿ ಅಭಿನಂದಿಸಿದರು.

ಈ ವೇಳೆ ಮುಸ್ಲಿಂ ಮುಖಂಡ ಇನ್ನೂಸ್ ಮುಲ್ಲಾ ಸಾಧಕ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಮಾತನಾಡಿ ಕೇವಲ ಕೋಚಿಂಗ್ ತರಗತಿಗಳಾಗಿ ಆರಂಭಗೊಂಡ ಸನಾ ಶಿಕ್ಷಣ ಸಂಸ್ಥೆಯು ಇಂದು ಪಿಯು ಕಾಲೇಜು ಆಗಿ ಅತ್ಯಂತ ಕಡಿಮೆ ಅವಧಿಯಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ತನ್ನದೇ ಆದ ವಿಶಿಷ್ಟ ಗುರುತನ್ನು ಮೂಡಿಸಿರುವುದು ಹೆಮ್ಮೆಯ ಸಂಗತಿ. ಸಂಸ್ಥೆಯ ಅಧ್ಯಕ್ಷ ಖಲೀಲ ಬಾಗವಾನ ಹಾಗೂ ಉಪನ್ಯಾಸಕರ ಪರಿಶ್ರಮದ ಫಲವಾಗಿ ಇಂದು ಈ ಅತ್ಯುತ್ತಮ ಸಾಧನೆ ಸಾಧ್ಯವಾಗಿದೆ. ಪ್ರತಿಯೊಬ್ಬ ಪಾಲಕರ ಕನಸು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಉಜ್ವಲ ಭವಿಷ್ಯ ರೂಪಿಸುವುದಾಗಿದೆ. ಆ ನಿಟ್ಟಿನಲ್ಲಿ ಸನಾ ಕಾಲೇಜು ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ವಿದ್ಯಾರ್ಥಿಗಳು ವೈದ್ಯಕೀಯ ಶಿಕ್ಷಣ ಸೇರಿದಂತೆ ವಿವಿಧ ವೃತ್ತಿಪರ ಕೋರ್ಸ್ಗಳಿಗೆ ಆಯ್ಕೆಯಾಗಲಿ," ಎಂದು ಶುಭ ಹಾರೈಸಿದರು.

ಆನಂತರ ಸಂಸ್ಥೆಯ ಅಧ್ಯಕ್ಷ ಖಲೀಲ ಬಾಗವಾನ ಮಾತನಾಡಿ, ನಮ್ಮ ಸಂಸ್ಥೆಯಲ್ಲಿ ಕಲಿತ 8 ವಿದ್ಯಾರ್ಥಿಗಳು ನೀಟ್ ಪರೀಕ್ಷೆಯಲ್ಲಿ ಉತ್ತಮ ಅಂಕಗಳನ್ನು ಪಡೆದು ಎಂಬಿಬಿಎಸ್‌ಗೆ ಆಯ್ಕೆಯಾಗಿರುವುದು ಸಂಸ್ಥೆಗೆ ಹಾಗೂ ಅವರ ಪಾಲಕರಿಗೆ ಹೆಮ್ಮೆಯ ವಿಷಯವಾಗಿದೆ. ಶಿಕ್ಷಕರು ಎಷ್ಟೇ ಉತ್ತಮವಾಗಿ ಬೋಧಿಸಿದರೂ, ವಿದ್ಯಾರ್ಥಿಗಳ ಪರಿಶ್ರಮ ಮತ್ತು ಆಸಕ್ತಿ ಇದ್ದಾಗ ಮಾತ್ರ ಯಶಸ್ಸು ಸಾಧ್ಯ. ಈ ವರ್ಷದ ಫಲಿತಾಂಶ ನಮ್ಮೆಲ್ಲರ ಶ್ರಮದ ಪ್ರತಿಫಲವಾಗಿದೆ. ಮುಂದಿನ ವರ್ಷಗಳಲ್ಲಿ ಇನ್ನಷ್ಟು ವಿದ್ಯಾರ್ಥಿಗಳನ್ನು ಅತ್ಯುತ್ತಮ ಸಾಧನೆಗೈಯುವಂತೆ ತಯಾರು ಮಾಡುವ ಗುರಿ ಹೊಂದಿದ್ದೇವೆ. ಈ ಯಶಸ್ಸಿಗೆ ಶಾಲೆಯ ಉಪನ್ಯಾಸಕರು ಸಿಬ್ಬಂದಿ ವರ್ಗದವರು ವಿದ್ಯಾರ್ಥಿಗಳು ಹಾಗೂ ಪಾಲಕರ ಸಹಕಾರವೇ ಪ್ರಮುಖ ಕಾರಣ," ಎಂದು ಹೇಳಿದರು.

ನಂತರ ಯಶಸ್ವಿ ವಿದ್ಯಾರ್ಥಿಗಳು ಹಾಗೂ ಅವರ ಪಾಲಕರು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು. ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಸತ್ಕರಿಸಿದ್ದಕ್ಕೆ ಅಂಜುಮನ್-ಎ-ಇಸ್ಲಾಂ ಸಮಿತಿ ಮತ್ತು ಸಮಾಜದ ಮುಖಂಡರಿಗೆ ಕೃತಜ್ಞತೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಾಧಕ ವಿದ್ಯಾರ್ಥಿನಿ ಸಾಲಿಯಾ ಹಿಪ್ಪರಗಿ ಮಾತನಾಡಿ ಮುಂದೆ ಗುರಿ ಇರಬೇಕು ಹಿಂದೆ ಗುರು ಇರಬೇಕು ಎನ್ನುವಂತೆ ನಮ್ಮಲ್ಲಿ ಸಾಧಿಸುವ ಛಲವೊಂದಿದ್ದರೆ ಅಸಾಧ್ಯವಾದುದು ಯಾವುದು ಇಲ್ಲ ನನ್ನ ಈ ಸಾಧನೆಗೆ ಕಾಲೇಜಿನ ಉಪನ್ಯಾಸಕ ವರ್ಗ ಹಾಗೂ ಸಂಸ್ಥೆಯ ಅಧ್ಯಕ್ಷ ಖಲೀಲ್ ಬಾಗವಾನ ಅವರ ಸತತ ಪರಿಶ್ರಮದಿಂದ ಸಾಧ್ಯವಾಗಿದೆ. ಪ್ರತಿದಿನ ನೀಟ್ ಪರೀಕ್ಷೆಗೆ ಸಂಬಂಧಿಸಿದಂತೆ ಪೂರ್ವತಯಾರಿ ಪರೀಕ್ಷೆ ನಡೆಸುತ್ತಿದ್ದರು ನಾವು ತಪ್ಪಿದಾಗ ಎಚ್ಚರಿಸಿ ಮಾರ್ಗದರ್ಶನ ಮಾಡಿ ನಿರಂತರವಾಗಿ ಜ್ಞಾನ ಹಾಗೂ ಧೈರ್ಯ ತುಂಬುತ್ತಿದ್ದರು. ನಮ್ಮಲ್ಲಿ ಉತ್ಸಾಹ ತುಂಬಿ ಅಭ್ಯಾಸ ಮಾಡಲು ಪ್ರೇರಣೆ ನೀಡುತ್ತಿದ್ದರು ಕಾಲೇಜಿನ ಆಡಳಿತ ಮಂಡಳಿಯವರು. ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗದವರು ಸಹಾಯ ಸಹಕಾರದಿಂದ ಈ ಸಾಧನೆ ಸಾಧ್ಯವಾಗಿದೆ ಎಂದಳು.

ಆ ನಂತರ ಇನ್ನೋರ್ವ ಸಾಧಕ ವಿದ್ಯಾರ್ಥಿನಿ ಸೌಭಾಗ್ಯ ತಂಗಡಿ ತನ್ನ ಅನಿಸಿಕೆಗಳನ್ನು ಹಂಚಿಕೊಂಡಳು.

ಈ ಸಂದರ್ಭದಲ್ಲಿ ಅಂಜುಮನ್-ಎ-ಇಸ್ಲಾಂ ಸಮಿತಿಯ ಅಧ್ಯಕ್ಷ ಸಯ್ಯದ ಅಮೀನ್ ಗದ್ಯಾಳ, ಮುಸ್ಲಿಂ ಸಮಾಜದ ಮುಖಂಡರಾದ ಇನ್ನೂಸ್ ಮುಲ್ಲಾ, ಇಲಿಯಾಸ್ ಹಿಪ್ಪರಗಿ, ಅಬ್ದುಲ್ ಅಜೀಜ್ ಮುಲ್ಲಾ, ಹಾಜಿ ಶಫೀಕ್ ಮುಲ್ಲಾ, ಹಾಜಿ ರಿಯಾಜ ಮುಲ್ಲಾ, ಇಮ್ರಾಣ ಪಟಾಯತ, ಅಬೂಬಕರ್ ಕೊಕಟನೂರ, ಡಾ. ಇಸ್ಮಾಯಿಲ್ ಮೊಮಿನ್, ಇರ್ಷಾದ್ ಮನಗೂಳಿ, ನಿಸಾರ್ ಶೇಖ್, ಸುಫೀಯಾನ್ ಹಿಪ್ಪರಗಿ. ಅಜಹರ್ ಮುಲ್ಲಾ (ಸರ್), ದಾದಾಪೀರ ಜಮಾದಾರ್, ಸಲೀಂ ಮುಲ್ಲಾ, ಸಾಬಿರ್ ಮುಲ್ಲಾ ಸೇರಿದಂತೆ ಶಿಕ್ಷಕ ವೃಂದದವರಾದ ಪ್ರಕಾಶ ಲಗಳಿ, ಗಾಯತ್ರಿ ಕಿವಡಿ, ಜುಬೇರ ಮೋಮಿನ, ಸುಧಾಕರ ತೆಲಗಡೆ ಉಪಸ್ಥಿತರಿದ್ದರು.

# ನೀಟ್ ಅಕ್ರಮ ಖಂಡಿಸಿ ಪ್ರತಿಭಟನೆ, ರಾಷ್ಟ್ರಪತಿಗಳಿಗೆ ಮನವಿ




**ವಿಜಯಪುರ, ಜು. 25:** ದೇಶಾದ್ಯಂತ ತೀವ್ರ ಚರ್ಚೆಗೆ ಗ್ರಾಸವಾಗಿರುವ ನೀಟ್ (NEET) ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ ಹಾಗೂ ಪರೀಕ್ಷಾ ಒತ್ತಡ ಮತ್ತು ಅಕ್ರಮಗಳಿಂದ ಮನನೊಂದು ವಿದ್ಯಾರ್ಥಿಗಳು ಆತ್ಮಹತ್ಯೆಗೆ ಶರಣಾಗುತ್ತಿರುವ ಘಟನೆಗಳನ್ನು ತೀವ್ರವಾಗಿ ಖಂಡಿಸಿ, ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನಾ ಸಮಿತಿ ರಾಜ್ಯ ಘಟಕ ಹಾಗೂ ವಿಜಯಪುರ ಜಿಲ್ಲಾ ಘಟಕದ ವತಿಯಿಂದ ರಾಷ್ಟ್ರಪತಿಗಳಿಗೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಯಿತು.ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ಸಂಘಟನೆಯ ರಾಜ್ಯಾಧ್ಯಕ್ಷ ಜಗದೇವ ಎಸ್. ಸೂರ್ಯವಂಶಿ, ನೀಟ್ ಪರೀಕ್ಷೆಯಲ್ಲಿನ ಅಕ್ರಮಗಳು ಲಕ್ಷಾಂತರ ವಿದ್ಯಾರ್ಥಿಗಳ ಕನಸುಗಳನ್ನು ನುಚ್ಚುನೂರಾಗಿಸಿದ್ದು, ದೇಶದ ಶಿಕ್ಷಣ ವ್ಯವಸ್ಥೆಯ ಮೇಲಿನ ನಂಬಿಕೆಗೆ ಗಂಭೀರ ಪೆಟ್ಟು ನೀಡಿವೆ ಎಂದು ಕಳವಳ ವ್ಯಕ್ತಪಡಿಸಿದರು.ದೆಹಲಿಯ ಜಂತರ್ ಮಂತರ್‌ನಲ್ಲಿ ಕಳೆದ ಹಲವು ದಿನಗಳಿಂದ ದೇಶದ ವಿವಿಧ ರಾಜ್ಯಗಳ ವಿದ್ಯಾರ್ಥಿಗಳು, ಪೋಷಕರು ಹಾಗೂ ವಿವಿಧ ಸಂಘಟನೆಗಳು ನ್ಯಾಯಕ್ಕಾಗಿ ನಿರಂತರ ಹೋರಾಟ ನಡೆಸುತ್ತಿದ್ದು, ಈ ಜನಾಂದೋಲನಕ್ಕೆ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನಾ ಸಮಿತಿಯು ಸಂಪೂರ್ಣ ಬೆಂಬಲ ವ್ಯಕ್ತಪಡಿಸುತ್ತದೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರವು ನೀಟ್ ಅಕ್ರಮವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ, ಸುಪ್ರೀಂ ಕೋರ್ಟ್ ಮೇಲ್ವಿಚಾರಣೆಯಲ್ಲಿ ಅಥವಾ ಸ್ವತಂತ್ರ ತನಿಖಾ ಸಂಸ್ಥೆಯ ಮೂಲಕ ಪಾರದರ್ಶಕ ತನಿಖೆ ನಡೆಸಬೇಕು. ಪ್ರಶ್ನೆಪತ್ರಿಕೆ ಸೋರಿಕೆಯಲ್ಲಿ ಭಾಗಿಯಾಗಿರುವ ಎಲ್ಲ ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸುವುದರೊಂದಿಗೆ, ಪರೀಕ್ಷಾ ವ್ಯವಸ್ಥೆಯಲ್ಲಿ ಸಮಗ್ರ ಸುಧಾರಣೆಗಳನ್ನು ಜಾರಿಗೆ ತಂದು ವಿದ್ಯಾರ್ಥಿಗಳ ವಿಶ್ವಾಸವನ್ನು ಮರುಸ್ಥಾಪಿಸಬೇಕು ಎಂದು ಆಗ್ರಹಿಸಿದರು.ಅಲ್ಲದೆ, ನೀಟ್ ಅಕ್ರಮ ಹಾಗೂ ಪರೀಕ್ಷಾ ಒತ್ತಡದಿಂದ ಜೀವ ಕಳೆದುಕೊಂಡ ವಿದ್ಯಾರ್ಥಿಗಳ ಕುಟುಂಬಗಳಿಗೆ ಸೂಕ್ತ ಪರಿಹಾರ, ನ್ಯಾಯ ಹಾಗೂ ಅಗತ್ಯ ನೆರವು ಒದಗಿಸಬೇಕು. ಭವಿಷ್ಯದಲ್ಲಿ ಇಂತಹ ದುರ್ಘಟನೆಗಳು ಮರುಕಳಿಸದಂತೆ ಶಿಕ್ಷಣ ವ್ಯವಸ್ಥೆಯಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ಖಚಿತಪಡಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ರಾಜ್ಯ ಉಪಾಧ್ಯಕ್ಷ ಈಶ್ವರ ಚಂದ್ರ ಪಡಗಣ್ಣವರ, ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ. ಎಂ.ಆರ್. ಗುರಿಕಾರ, ಶಂಕರ ಸಾತಪೋತೆ, ಶರಣಪ್ಪ ಕಟ್ಟಿ, ಪರಶುರಾಮ ತೊರವಿ, ಸುರೇಶ್ ನಿನ್ನೆ, ನೀಲಂಬಿಕಾ ಬಿರಾದಾರ, ಸುಶೀಲಾ ಮಿನಜಗಿ, ಜ್ಯೋತಿ ಮಿನಜಗಿ ಸೇರಿದಂತೆ ಸಂಘಟನೆಯ ಹಲವು ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು. ಆರೋಗ್ಯಸಲಹೆಗಳು

# ಸಚಿವ ಪ್ರಧಾನ್ ರಾಜೀನಾಮೆಗೆ ಆಗ್ರಹ

**ಜೇವರಗಿ,ಜು 25:** ನೀಟ್ ಪರೀಕ್ಷೆ ಪ್ರಶ್ನೆಪತ್ರಿಕೆ ಸೋರಿಕೆ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿನ ಅವ್ಯವಸ್ಥೆಯನ್ನು ಖಂಡಿಸಿ ಹಾಗೂ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕೆಂದು ಆಗ್ರಹಿಸಿ ವಿವಿಧ ಪ್ರಗತಿಪರ ಸಂಘಟನೆಗಳು ಹಾಗೂ ಹಲವಾರು ವಿದ್ಯಾರ್ಥಿಗಳು ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

ರಿಲಯನ್ಸ್ ಪೆಟ್ರೋಲ್ ಬಂಕ್‌ನಿಂದ ಮಿನಿ ವಿಧಾನಸೌದ ಕಚೇರಿಯವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ ಉಪ ತಹಶೀಲ್ದಾರ್ ಟಿಪ್ಪು ಸುಲ್ತಾನ್ ಅವರ ಮೂಲಕ ರಾಷ್ಟ್ರಪತಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಮಾಜೀದ್‌ಪಟೇಲ್ ಯಾಳವಾರ ಮಾತನಾಡಿ, ವಿದ್ಯಾರ್ಥಿಗಳಿಗೆ ಮಾರಣಾಂತಿಕ ಹಲ್ಲೆ ನಡೆಸಿರುವುದು ಕೇಂದ್ರ ಸರ್ಕಾರದ ಸರ್ವಾಧಿಕಾರಿ ಧೋರಣೆಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಟಿಪ್ಪು ಸುಲ್ತಾನ್ ಕಮಿಟಿ ಅಧ್ಯಕ್ಷ ಮೋಹಿಯುದ್ದೀನ್ ಇನಾಮದಾರ, ಸೇಠ ಗಿರಣಿ, ಪಾಟೀಲ ಮುತ್ತಕೋಡ, ರವಿಚಂದ್ರ ಗುತ್ತೇದಾರ, ಇಬ್ರಾಹಿಂ ಪಟೇಲ್, ಮೊಬಿನ್ ಗುತ್ತೇದಾರ, ಸುನೀಲ ಚನ್ನೂರ, ಕರವೇ ಹೋರಾಟಗಾರ ಬಿ.ಹೆಚ್.




ಮಾಲಿಪಾಟೀಲ, ರೈತ ಮುಖಂಡ ಅಲ್ಲಾಪಟೇಲ ಇಜೇರಿ, ದಲಿತ ಮುಖಂಡರಾದಭೀಮರಾಯ ನಗನೂರ, ಮಲ್ಲಣ್ಣ ಕೊಡಚಿ, ಸಿದ್ರಾಮ ಕಟ್ಟಿ, ಶ್ರೀಹರಿ ಕರಕಿಹಳ್ಳಿ, ರವಿ ಕುರಳಗೇರಾ, ವಿಶ್ವರಾಧ್ಯ ಗಂವ್ಹಾರ, ಬಸವರಾಜ ಬಾಗೇವಾಡಿ, ಮಹಿಬೂಬ್ ಮನಿಯಾರ ಮಳ್ಳಿ, ಕಾಂತಪ್ಪ ಚನ್ನೂರ, ಭೀಮರಾಯ ಖಾದ್ಯಾಪೂರ, ರಿಯಾಜ್ ಯಾಳವಾರ ಇದ್ದರು

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE